ಸಂಪುಟ : 8 ಸಂಚಿಕೆ : 268 ಪುಟ : 4 ಬೆಲೆ : 3.00 ರವಿವಾರ ಡಿಸೆಂಬರ್ 3, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 268 Pages : 4 Price : 3.00 Sunday December 3, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್ 3 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ :** ವಾರ್ಡ್ ನಂ. 3 ರಾಜಾಜಿ ರೋಡ್ ಕುಂಬಾರ ಓಣಿ, ಅಯ್ಯಪ್ಪ ಗದ್ದುಗೆ, ಬಣ್ಣದ ನಗರ ಮಿಷನ್ ಕಾಂಪೌಂಡ್ ಭಾಗ –1,2 ಹುಯಿಲಗೋಳ ರೋಡ ಪೂರ್ತಿ ಭಾಗಗಳು, ಕೆಇಬಿ ಆಫೀಸ್ ಲೈನ್, ದೊಡ್ಡ ಗಣಪತಿ ಲೈನ್. ವಾರ್ಡ್ ನಂ. 29 ಸಾಯಿನಗರ, ಪಂಚಾಕ್ಷರಿ ನಗರ, ಸಾಯಿಬಾಬಾ ಗುಡಿ ಲೈನ್, ಹನುಮಂತ ದೇವರ ಗುಡಿ, ಗಣಪತಿ ಗುಡಿ, ವಾರ್ಡ್ ನಂ. 27 ಪಂಚಾಕ್ಷರಿ ನಗರ 2ನೇ ಕ್ರಾಸ್ , 3ನೇ ಕ್ರಾಸ್. ವಾರ್ಡ್ ನಂ. 7, 5 ಇಂಡಸ್ಟ್ರಿಯಲ್ ,ನೇಕಾರ ಕಾಲೋನಿ, ರಂಗಾವದೂತ ನಗರ. ವಾರ್ಡ್ ನಂ. 5 ಶಿವಾನಂದ ನಗರ ಭಾಗ–1, 2, 3, 4, 5 ತಟ್ಟಿಯವರ ಲೈನ್, ನಾವಳ್ಳಿಯವರ ಲೈನ್, ಮಳಲಿಯವರ ಲೈನ್, ಖಾನಾಪುರದವರ ಲೈನ್, ಪವಾರ್ ಲೈನ್, ಪೂಜಾರ ಲೈನ್, ಪಣಿಬಂಧರವರ ಲೈನ್, 4 ಭಾಗಗಳು ಗಣೇಶನಗರ. ಕುಡಿಯುವ ನೀರಿನ ನಳ ಹೊಂದಿರುವ ನಾಗರಿಕರು ತಮ್ಮ ನೀರಿನ ಕರ ತುಂಬಿ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಉದ್ಯಾನವನದಲ್ಲಿ ಉದಯರಾಗ, ಸಂಧ್ಯಾರಾಗ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಉದ್ಯಾನವನದಲ್ಲಿ ಉದಯರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಡಿಸೆಂಬರ್ 3 ರಂದು ರವಿವಾರ ಬೆಳಿಗ್ಗ:6.30 ರಿಂದ 7.30 ರವರೆಗೆ ನಡೆಯುವ ಉದಯರಾಗ ಕಾರ್ಯಕ್ರಮದಲ್ಲಿ ರಾಜೀವಗಾಂಧಿ ನಗರದ ಶಿವಶರಣ ಹರಳಯ್ಯ ಉದ್ಯಾನವನದಲ್ಲಿ ಮಂಜುನಾಥ ಭಟ್‌ರವರಿಂದ "ಸುಗಮ ಸಂಗೀತ" ವಿಶ್ವೇಶ್ವರಯ್ಯ ನಗರದ ವಿಶ್ವೇಶ್ವರಯ್ಯ ಉದ್ಯಾನವನದಲ್ಲಿ ಲಕ್ಷ್ಮಣ ತಳವಾರ ಇವರಿಂದ "ಸುಗಮ ಸಂಗೀತ" ಸಾಯಂಕಾಲ: 5.30 ರಿಂದ 6.30 ಗಂಟೆಯವರೆಗೆ ಭೀಷ್ಮಕೆರೆಯ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಮಂಜುನಾಥ ಬಂಡಿವಡ್ಡರ ಇವರಿಂದ "ಶಾಸ್ತ್ರೀಯ ಸಂಗೀತ" ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೋಣ : ಡಿ.5ರಂದು ವಿದ್ಯುತ್ ನಿಲುಗಡೆ

■ ವಿಜಯಸಾಕ್ಷಿ ಸುದ್ದಿ, ಗದಗ

"110/11kv ರೋಣ ಮತ್ತು ಬೆಳವಣಿಕಿ ವಿದ್ಯುತ್ ವಿತರಣಾ ಉಪ–ಕೇಂದ್ರದ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಡಿಸೆಂಬರ್ 5 ರಂದು ಬೆಳಿಗ್ಗ10 ಘಂಟೆಯಿಂದ ಸಾಯಂಕಾಲ 05:30 ಘಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

110/11kv ರೋಣ ವಿದ್ಯುತ್ ವಿತರಣಾ ಉಪ–ಕೇಂದ್ರದ ನಿರಂತರ ಜ್ಯೋತಿ ಮತ್ತು ನೀರಾವರಿ ಪಂಪ್‌ಸೆಟ್‌ನ ವಿದ್ಯುತ್ ಪೂರೈಕೆಯಾಗುತ್ತಿರುವ ರೋಣ, ಕೃಷ್ಣಾಪುರ, ಹೊಸಳ್ಳಿ, ಜಿಗಳೂರ, ಕುರಹಟ್ಟಿ, ಮುದೇನಗುಡಿ, ಹುಲ್ಲೂರ, ಸೋಮನಕಟ್ಟಿ ಹಾಗೂ110/11kv ಬೆಳವಣಿಕಿ ವಿದ್ಯುತ್ ವಿತರಣಾ ಉಪ–ಕೇಂದ್ರದ ನಿರಂತರ ಜ್ಯೋತಿ ಮತ್ತು ನೀರಾವರಿ ಪಂಪ್‌ಸೆಟ್‌ನ ವಿದ್ಯುತ್ ಪೂರೈಕೆಯಾಗುತ್ತಿರುವ ಸವಡಿ, ಹೊನ್ನಾಪೂರ, ಬೆಳವಣಿಕಿ, ಚಿಕ್ಕಮಣ್ಣೂರ, ಸಂದಿಗವಾಡ, ಅರಹುಣಸಿ, ಮಲ್ಲಾಪೂರ, ಭಾಸಲಾಪೂರ, ಹಿರೇಮಣ್ಣೂರ, ಯಾವಗಲ್, ಯಾ ಸ ಹಡಗಲಿ, ಕೌಜಗೇರಿ ಗ್ರಾಮಗಳಲ್ಲಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

## ಇಂದು ವಿಶ್ವ ವಿಕಲಚೇತನರ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲೆಯಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘ ಸಂಸ್ಥೆಗಳು ಇವರುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ 2023 ಕಾರ್ಯಕ್ರಮವನ್ನು ನಗರದ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಡಿಸೆಂಬರ್ 3 ರಂದು ಬೆಳಿಗ್ಗೆ 10.30 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರಾದ ಶ್ರೀಮತಿ ಲಕ್ಷ್ಮೀ ಹೆಬ್ಬಾಳಕರ್ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ಆಗಮಿಸುವರು. ವಿಶೇಷ ಆಹ್ವಾನಿತರಾಗಿ ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಕೆ. ಗುರುಪ್ರಸಾದ ಆಗಮಿಸುವರು. ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕ ಸಬಲೀಕರಣ ಕಲ್ಯಾಣಾಧಿಕಾರಿ ಕೆ.ಮಹಾಂತೇಶ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಪರಶುರಾಮ ಶೆಟ್ಟೆಪ್ಪನವರ ಸ್ವಾಗತ ಕೋರಿದ್ದಾರೆ.

### ವಿವಿಧ ಪ್ರಕರಣಗಳ ತ್ವರಿತ ಇತ್ಯರ್ಥಕ್ಕೆ ಸುವರ್ಣಾವಕಾಶ: ಸುದ್ದಿಗೋಷ್ಠಿಯಲ್ಲಿ ನ್ಯಾ. ಬಸವರಾಜ ಮಾಹಿತಿ

# ಡಿ.9ರಂದು ರಾಷ್ಟ್ರೀಯ ಲೋಕ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಡಿಸೆಂಬರ್ ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗುತ್ತಿದ್ದು, ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸಲು ಇದೊಂದು ಸುವರ್ಣಾವಕಾಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ತಿಳಿಸಿದರು.

ಜಿಲ್ಲಾ ನ್ಯಾಯಾಲಯದ ವಿಡಿಯೋ ಕಾನ್ಫರನ್ಸ್ ಹಾಲ್‌ನಲ್ಲಿ ಶನಿವಾರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಪ್ರತಿಯೊಂದು ನ್ಯಾಯಾಲಯಕ್ಕೆ ಒಂದು ಬೆಂಚ್‌ನಂತೆ ಒಟ್ಟು 15 ಬೆಂಚ್‌ಗಳನ್ನು ರಚಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಒಟ್ಟು 19411 ವಿವಿಧ ಚಾಲ್ತಿ ಪ್ರಕರಣಗಳಿದ್ದು, ಅದರಲ್ಲಿ ಈಗಾಗಲೇ ರಾಜೀ ಆಗಬಹುದಾದ 5456 ಪ್ರಕರಣಗಳನ್ನು ಗುರುತಿಸಲಾಗಿದೆ. ಇದರಲ್ಲಿ ಸಿವಿಲ್ ದಾವೆಗಳಾದ ಜಮೀನುಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಮನೆ ಹಾಗೂ ನಿವೇಶನಗಳಿಗೆ ಸಂಬಂಧಪಟ್ಟ ವ್ಯಾಜ್ಯಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು,



ಮರಳು ಕಳ್ಳ ಸಾಗಾಣಿಕೆ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರ್ ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ಗುರುತಿಸಲಾಗಿದೆ.

ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ, ಅವರ ಮನವೊಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು. ಈಗಾಗಲೇ ಸಂಬಂಧಪಟ್ಟ ಇಲಾಖೆಯ ಹಾಗೂ ನಿಗಮ ಮಂಡಳಿಗಳ ಅಧಿಕಾರಿಗಳೊಂದಿಗೆ ಪೂರ್ವಭಾವಿ ಸಭೆ ಜರುಗಿಸಿ ಹೆಚ್ಚಿನ ಪ್ರಕರಣಗಳನ್ನು ರಾಜಿ ಮೂಲಕ ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ. ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು, ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ ಎಂದರು.

ಸೆಪ್ಟೆಂಬರ್–2023ರ ಮಾಹೆಯಲ್ಲಿ ಜರುಗಿದ ಲೋಕ ಅದಾಲತ್‌ನಲ್ಲಿ 2067 ಚಾಲ್ತಿ ಪ್ರಕರಣಗಳು, 4710 ವ್ಯಾಜ್ಯಪೂರ್ವ ಪ್ರಕರಣಗಳು ಸೇರಿ ಒಟ್ಟು 6777 ಪ್ರಕರಣಗಳ್ನು ರಾಜಿ ಮೂಲಕ ಇತ್ಯರ್ಥಪಡಿಸಿದೆ. ಇದರಲ್ಲಿ ವಿಶೇಷವಾಗಿ 10 ಕೌಟುಂಬಿಕ ಪ್ರಕರಣಗಳಲ್ಲಿ ಸತಿ–ಪತಿಗಳನ್ನು ಪುನಃ ಒಂದುಗೂಡಿಸಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಸವರಾಜ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ. ಗುರುಪ್ರಸಾದ ಉಪಸ್ಥಿತರಿದ್ದರು.

> ಲೋಕ ಅದಾಲತ್‌ನ ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಬಹುದಾಗಿದೆ. ರಾಜಿ ಸಂಧಾನದಲ್ಲಿ ಪ್ರಕರಣ ಇತ್ಯರ್ಥವಾದರೆ ನ್ಯಾಯಾಲಯಕ್ಕೆ ತುಂಬಿದ ಶುಲ್ಕವನ್ನು ಸಂಪೂರ್ಣ ಮರುಪಾವತಿ ಮಾಡಲಾಗುವುದು. ಪ್ರಕರಣ ರಾಜೀ ಆದಲ್ಲಿ ಉಭಯ ಪಕ್ಷಗಾರರಿಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ. ಇಲ್ಲಿಗೆ ಪ್ರಕರಣ ಮುಕ್ತಾಯಗೊಂಡು ತಮ್ಮ ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ಸಹಾಯಕವಾಗುತ್ತದೆ ಎಂದು ನ್ಯಾ. ಬಸವರಾಜ ತಿಳಿಸಿದರು.

### ವಿವಿಧ ಸಮಾಜಗಳ ಮುಖಂಡರಿಂದ ಶಾಸಕ ಡಾ. ಚಂದ್ರು ಲಮಾಣಿ ವಿರುದ್ಧ ಆರೋಪ

# ಶಾಸಕರು ತಮ್ಮ ತಪ್ಪು ನಡೆಯನ್ನು ತಿದ್ದಿಕೊಳ್ಳಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರೈತರು, ಹೋರಾಟಗಾರರ ಮೇಲೆ ಕೇಸ್ ದಾಖಲಿಸುವುದು, ಜಾತಿ ಆಧಾರಿತ ಮತ್ತು ದ್ವೇಷದ ರಾಜಕಾರಣ ಮೂಲಕ ಜನರಲ್ಲಿ ಭೀತಿ ಮೂಡಿಸುವ ಮತ್ತು ಹೋರಾಟದ ಹಕ್ಕನ್ನು ಕಸಿಯುತ್ತಿರುವ ಶಾಸಕ ಡಾ.ಚಂದ್ರು ಲಮಾಣಿ ತಮ್ಮ ತಪ್ಪು ನಡೆಯನ್ನು ತಿದ್ದಿಕೊಳ್ಳಬೇಕು. ಇಲ್ಲದಿದ್ದರೆ ಅವರ ವಿರುದ್ಧದ ಹೋರಾಟ ತೀವ್ರ ಸ್ವರೂಪ ಪಡೆದುಕೊಳ್ಳಲಿದೆ ಎಂದು ಮಂಜುನಾಥ ಮಾಗಡಿ ಹೇಳಿದರು.

ಶನಿವಾರ ವಿವಿಧ ಸಮಾಜಗಳ ಮುಖಂಡರು ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಸುರೇಶ ನಂದೆಣ್ಣವರ ಮಾತನಾಡಿ, ಶಿರಹಟ್ಟಿ ಮತಕ್ಷೇತ್ರದಲ್ಲಿ ಸಾಕಷ್ಟು ಶಾಸಕರು ಆಡಳಿತ ಮಾಡಿದ್ದಾರೆ. ಆದರೆ ಈಗೀರುವ ಶಾಸಕರು ಸಣ್ಣ ವಿಷಯಗಳನ್ನು ವಿಪರೀತವಾಗಿ ತೆಗೆದುಕೊಂಡು ವಯಕ್ತಿಕ ದ್ವೇಷವನ್ನು ಸಾಧಿಸುತ್ತಿದ್ದಾರೆ ಎಂದು ಆರೋಪಿಸಿದರು.

ಶಾಸಕರಾದವರು ಒಂದೇ ಸಮಾಜಕ್ಕೆ ಸೀಮಿತವಾಗಿಲ್ಲ. ಶಾಸಕರು ಕ್ಷೇತ್ರದ ಅಭಿವೃದ್ಧಿಯತ್ತ ಗಮನ ಹರಿಸುವುದು ಬಿಟ್ಟು ಹೋರಾಟಗಾರರ ಮೇಲೆ ಪ್ರಕರಣ ದಾಖಲಿಸುವ ಮೂಲಕ ಅವರನ್ನು ಹೆದರಿಸುವ ಕಾರ್ಯ ಮಾಡುತ್ತಿದ್ದಾರೆ ಎಂದು ಅಸಮಾಧಾನ



ವ್ಯಕ್ತಪಡಿಸಿದರು. ರೈತಪರ ಹೋರಾಟಗಾರ ಮಹೇಶ ಹೊಗೆಸೊಪ್ಪಿನ ಹಾಗೂ ಸಂಗಡಿಗರು ಶಾಸಕರು ಕ್ಷಮೆ ಕೇಳುವಂತೆ ಒತ್ತಾಯಿಸಿದ್ದರು. ಇದನ್ನು ಮನಸ್ಸಿನಲ್ಲಿ ಇಟ್ಟುಕೊಂಡು ಶಾಸಕರು ಅವರ ಬೆಂಬಲಿಗರೊಂದಿಗೆ ಪುರಸಭೆ ಮುಖ್ಯಾಧಿಕಾರಿಗೆ ಮನವಿ ಸಲ್ಲಿಸಿ, ಪೊಲೀಸ್ ಠಾಣೆಯಲ್ಲಿ ರಾತ್ರೋ ರಾತ್ರಿ ಪ್ರಕರಣ ದಾಖಲಿಸಿರುವುದು ಖಂಡನೀಯ. ಈ ಎಲ್ಲ ಘಟನೆಗಳನ್ನು ಗಮನದಲ್ಲಿಟ್ಟುಕೊಂಡು ತಮ್ಮ ನಡೆಯನ್ನು ಬದಲಾಯಿಸಿಕೊಳ್ಳದಿದ್ದಲ್ಲಿ ಶಾಸಕರ ವಿರುದ್ಧ ರಾಜ್ಯಾದ್ಯಂತ ಹೋರಾಟಗಳನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಹೇಳಿದರು.

ಮಂಜು ಹೊಗೆಸೊಪ್ಪಿನ ಮಾತನಾಡಿ, ಬಂಜಾರ ಸಮಾಜದ ಮೇಲೆ ನಮಗೆ ಗೌರವ ಇದೆ. ಶಾಸಕರು ಜಾತಿ–ಜಾತಿಯ ನಡುವೆ ಜಗಳ ಹಚ್ಚುವ ಕೆಲಸ ಮಾಡದಿರುವುದು ಒಳಿತು. ಇದು ರಾಜಕೀಯವಾಗಿ ಅಷ್ಟೇ ಅಲ್ಲದೇ ಸಾಮಾಜಿಕ ಸ್ವಾಸ್ಥ್ಯವನ್ನೂ ಕೆಡಿಸುತ್ತದೆ ಎಂದರು.

ಹಿರಿಯರಾದ ಚಂಬಣ್ಣ ಬಾಳಿಕಾಯಿ, ದೇವಣ್ಣ ಬಳಿಗಾರ, ಚನ್ನಪ್ಪ ಜಗಲಿ ಮಾತನಾಡಿ, ಶಾಸಕರಿಗೆ ರಾಜಕೀಯ ಅನುಭವ ಕಡಿಮೆ. ದಲಿತ ಶಾಸಕನಿಗೆ ಹಲ್ಲೆ ಮಾಡುತ್ತಿದ್ದಾರೆ ಎಂದು ತಮ್ಮ ಸಮಾಜದವರಿಂದ ಹೆಸರಿಸುವ ಕಾರ್ಯ ಮಾಡುತ್ತಿರುವುದು ಉತ್ತಮ ಬೆಳವಣಿಗೆಯಲ್ಲ. ಶಾಸಕರು ತಮ್ಮ ತಪ್ಪನ್ನು ಸರಿಪಡಿಸಿಕೊಳ್ಳಬೇಕು. ಎಲ್ಲರನ್ನೂ ಸಮಾನತೆಯಿಂದ ಕಾಣಬೇಕು. ಇಲ್ಲದಿದ್ದರೆ ಕೆಟ್ಟ ಪರಿಸ್ಥಿತಿ ಎದುರಿಸಬೇಕಾಗುತ್ತದೆ. ಕೇವಲ ಒಂದು ಜಾತಿಯಿಂದ ತಾವು ಆಯ್ಕೆಯಾಗಿಲ್ಲ ಎಂಬ ಅರಿವಿರಬೇಕು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಅಮರಪ್ಪ ಗುಡಗುಂಟಿ, ಸುರೇಶ ರಾಚನಾಯ್ಕರ, ಎಂ.ಎಸ್. ದೊಡ್ಡಗೌಡರ, ಶರಣು ಗೋಡಿ, ಗಂಗಾಧರ ಮೆಣಸಿನಕಾಯಿ, ಸಿದ್ದನಗೌಡ ಬಳ್ಳೊಳ್ಳಿ, ಪ್ರಕಾಶ ಮಾದನೂರ, ಶಿವಜೋಗೆಪ್ಪ ಚಂದರಗಿ, ಬಸವರಾಜ ಕಲ್ಲೂರ ಮಾತನಾಡಿದರು.

> ಮಹೇಶ ಮೇಟಿ ಮಾತನಾಡಿ, ಶಾಸಕರು ಏನೇ ಮಾಡಿದರೂ ಯಾರೂ ಪ್ರಶ್ನಿಸಬಾರದು ಎನ್ನುವ ಉದ್ದೇಶದಿಂದ ಇಲ್ಲದ ಪ್ರಕರಣಗಳನ್ನು ದಾಖಲಿಸಿ ಹೆದರಿಸುತ್ತಿದ್ದಾರೆ. ಅಲ್ಲದೆ ಯಾವುದೇ ಶಾಸಕರಿಗೂ ಇಲ್ಲದ ಗನ್‌ಮ್ಯಾನ್ ಸೇವೆ ಇವರಿಗೆ ಅವಶ್ಯವಿತ್ತೆ? ವಿಧಾನಸಭೆ ಅಧಿವೇಶನಕ್ಕೆ ತೆರಳಿ ಮುಖ್ಯಮಂತ್ರಿ, ಗೃಹಮಂತ್ರಿಗಳಿಗೆ ಶಾಸಕರ ನಡೆಯ ವಿರುದ್ಧ ದೂರು ಸಲ್ಲಿಸುವದರ ಜೊತೆಗೆ ಲಕ್ಷ್ಮೇಶ್ವರ ಬಂದ್ ಮಾಡಿ ಪ್ರತಿಭಟನೆ ನಡೆಸಲಾಗುವದು. ಇದಕ್ಕೆ ಆಸ್ಪದ ಕೊಡದಿದ್ದರೆ ಒಳಿತು ಎಂದರು.

## ಇಂದು ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಜಿಲ್ಲಾದ್ಯಂತ ದಿ. 03.12.2023 ರ ರವಿವಾರ ನಡೆಯಲಿದೆ.


ಅರ್ಹರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ನೊಂದಾಯಿಸಲು, ತಿದ್ದುಪಡಿ ಮಾಡುವ ಕುರಿತು ಹಾಗೂ ಮತದಾರರ ಪಟ್ಟಿಯಲ್ಲಿನ



ಹೆಸರುಗಳನ್ನು ತೆಗೆದು ಹಾಕಲು, ನಿಮ್ಮ ಮತಗಟ್ಟೆ ವ್ಯಾಪ್ತಿಯ ಬಿಎಲ್‌ಒ ಸಂಪರ್ಕಿಸಬಹುದಾಗಿದೆ.

ಈ ಸುವರ್ಣ ಅವಕಾಶವನ್ನು ಸಾರ್ವಜನಿಕರು ಸದ್ಬಳಕೆ ಮಾಡಿಕೊಳ್ಳುವ ಮೂಲಕ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆಗೆ ಮುಂದಾಗಬೇಕೆಂದು ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ವೈಶಾಲಿ. ಎಂ.ಎಲ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಕರಾಟೆಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ವತಿಯಿಂದ ಮೈಸೂರಿನಲ್ಲಿ ಜರುಗಿದ ರಾಜ್ಯ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಸರಕಾರಿ ಪದವಿ ಪೂರ್ವ ಕಾಲೇಜು ಗದಗ ವಿದ್ಯಾರ್ಥಿ ಕುಮಾರ ಸಂದೀಪ ಚನ್ನದಾಸರ ಪ್ರಥಮ ಸ್ಥಾನ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಕಾಲೇಜಿನ ಪ್ರಾಚಾರ್ಯೆ ಪೂರ್ಣಿಮಾ ಹೊಸಮನಿ, ಕ್ರೀಡಾ ವಿಭಾಗದ ಮುಖ್ಯಸ್ಥರು ಕೆ. ಎಸ್. ಗಂಗನಗೌಡ್ರ ಮತ್ತು ಎಲ್ಲ ಸಿಬ್ಬಂದಿ ವರ್ಗದವರು ಅಭಿನಂದಿಸಿ ಶುಭ ಹಾರೈಸಿದ್ದಾರೆ.


## ಜಿಲ್ಲಾ ಉಸ್ತುವಾರಿ ಸಚಿವ ಪಾಟೀಲ ಇಂದು ಗದಗ ಜಿಲ್ಲೆಗೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು ಮತ್ತು ಮಾನವ ಹಕ್ಕುಗಳ ಸಂಸದೀಯ ವ್ಯವಹಾರಗಳು ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ.ಪಾಟೀಲ ಅವರು ಡಿಸೆಂಬರ್ 3 ರಂದು ಗದಗ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದು ವಿವರ ಇಂತಿದೆ:

ಡಿಸೆಂಬರ್ 3 ರಂದು ಬೆಳಿಗ್ಗೆ 6.30 ಗಂಟೆಗೆ ಹುಬ್ಬಳ್ಳಿಯಿಂದ ಗದುಗಿಗೆ ರಸ್ತೆ ಮೂಲಕ ಆಗಮಿಸುವರು. ಬೆಳಿಗ್ಗೆ 7.15 ಗಂಟೆಗೆ ಹುಲಕೋಟಿಯಲ್ಲಿ ಶ್ರೀ ಗವಿಸಿದ್ದೇಶ್ವರ ಸ್ವಾಮಿಗಳ ಪಾದ ಯಾತ್ರೆಯಲ್ಲಿ ಪಾಲ್ಗೊಳ್ಳುವರು.

ಬೆಳಿಗ್ಗೆ 10.30 ಕ್ಕೆ ಗದಗ ಜಿಲ್ಲಾಡಳಿತ ಸಭಾಂಗಣದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮದಲ್ಲಿ



ಪಾಲ್ಗೊಳ್ಳುವರು. ಬೆಳಿಗ್ಗೆ 11ಗಂಟೆಗೆ ಮುಳಗುಂದ ರಸ್ತೆಯಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಭಾಭವನದಲ್ಲಿ ಕರ್ನಾಟಕ ರಾಜ್ಯ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘ (ರಿ) ಗದಗ ಜಿಲ್ಲಾ ಘಟಕ ಇವರಿಂದ ಹೆಲ್ತ್ ಕಪ್ ಕ್ರಿಕೆಟ್ ಟೋರ್ನಮೆಂಟ್ ಸಮವಸ್ತ್ರ ವಿತರಣೆ ಹಾಗೂ ಪಾರಿತೋಷಕ ಅನಾವರಣ ಸಮಾರಂಭದಲ್ಲಿ ಭಾಗವಹಿಸುವರು.

ನಂತರ ಮಧ್ಯಾಹ್ನ 12–30 ಕ್ಕೆ ಕಪ್ಪತಗುಡ್ಡ ಪ್ರಕೃತಿ ಶಿಬಿರದ ಶಿಲಾನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ನಂತರ ಸಂಜೆ 5 ಗಂಟೆಗೆ ಜಿಲ್ಲಾ ಕೋರ್ಟಿನಲ್ಲಿ ಗದಗ ಜಿಲ್ಲಾ ವಕೀಲರ ಸಂಘದ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು, ಸಂಜೆ 6 ಕ್ಕೆ ಪೂಜ್ಯ ಶ್ರೀ ಗವಿಸಿದ್ದೇಶ್ವರ ಸ್ವಾಮಿಗಳ ಪ್ರವಚನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ರಾತ್ರಿ 8–30 ಕ್ಕೆ ರಸ್ತೆ ಮೂಲಕ ಬೆಳಗಾವಿಗೆ ಪ್ರಯಾಣಿಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## 36 ಲಕ್ಷ ಮತದಾರರಿಗೆ ಕರ್ನಾಟಕ ರಾಜ್ಯ ಚುನಾವಣಾ ಆಯೋಗ ನೋಟಿಸ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮತದಾರರ ಪಟ್ಟಿಯಲ್ಲಿ ಹೆಸರು ನಕಲು ಮಾಡಿರುವ ಅಥವಾ ಎರಡು ಕಡೆ ಮತದಾರರ ಪಟ್ಟಿಯಲ್ಲಿ ಹೆಸರಿರುವ 36 ಲಕ್ಷ ಮತದಾರರಿಗೆ ರಾಜ್ಯ ಚುನಾವಣಾ ಆಯೋಗವು ಭಾರತೀಯ ಅಂಚೆ ಮೂಲಕ ನೋಟಿಸ್ ನೀಡುವ ಪ್ರಕ್ರಿಯೆಯನ್ನು ಆರಂಭಿಸಿದೆ.

ಹೆಚ್ಚುವರಿಯಾಗಿ, ಮುಂದಿನ ವರ್ಷ ನಡೆಯಲಿರುವ ಲೋಕಸಭಾ ಚುನಾವಣೆಗೆ ಸ್ಪೀಡ್ ಪೋಸ್ಟ್ ಮೂಲಕ 40 ಲಕ್ಷ ಚುನಾವಣಾ ಫೋಟೋ ಗುರುತಿನ ಚೀಟಿಗಳನ್ನು (ಇಪಿಐಸಿ) ರವಾನಿಸುತ್ತಿದೆ. ಇಪಿಐಸಿಗಳು ಮತ್ತು ನೋಟಿಸ್‌ಗಳ ಬುಕಿಂಗ್ ಮತ್ತು ವಿತರಣೆಗಾಗಿ ಅಂಚೆ ಇಲಾಖೆ ಮತ್ತು ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳ ನಡುವೆ ಈ ಹಿಂದೆ ಸಹಿ ಮಾಡಿದ ತಿಳುವಳಿಕಾ ಒಪ್ಪಂದವನ್ನು ಅನುಸರಿಸುತ್ತಿದೆ.

ಈ ಬಗ್ಗೆ ಕರ್ನಾಟಕದ ಮುಖ್ಯ ಚುನಾವಣಾ ಅಧಿಕಾರಿ (ಸಿಇಒ), ಮನೋಜ್ ಕುಮಾರ್ ಮೀನಾ ದಿ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್ ಗೆ ಮಾಹಿತಿ ನೀಡಿದ್ದು, ಒಬ್ಬ ವ್ಯಕ್ತಿ ಒಂದಕ್ಕಿಂದ ಹೆಚ್ಚು ಗುರುತಿನ ಚೀಟಿ, ಅಥವಾ ಒಂದೇ ಕ್ಷೇತ್ರದ ವ್ಯಾಪ್ತಿಯಲ್ಲಿ ಕಂಡುಬಂದಿವೆ. ರಾಜ್ಯದಾದ್ಯಂತ ಮತದಾರರ ಯಾವುದೇ ರೀತಿಯ ನಕಲು ತೆಗೆದುಹಾಕಲು ನಾವು ಉತ್ಸುಕರಾಗಿದ್ದೇವೆ ಮತ್ತು ನಮ್ಮ ಪಟ್ಟಿಯಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ಹೆಸರುಗಳನ್ನು ಹೊಂದಿರುವ ಎಲ್ಲಾ ಮತದಾರರಿಗೆ ನೋಟಿಸ್‌ಗಳನ್ನು ನೀಡಿದ್ದೇವೆ ಎಂದು ಅವರು ಹೇಳಿದರು.

ರಾಜ್ಯದ 150 ಕ್ಕೂ ಹೆಚ್ಚು ಅಂಚೆ ಕಚೇರಿಗಳಲ್ಲಿ ಚುನಾವಣಾ ಆಯೋಗದಿಂದ ಸಾರ್ವಜನಿಕರಿಗೆ ನೋಟಿಸ್‌ಗಳ ಬುಕ್ಕಿಂಗ್ ಪ್ರಾರಂಭವಾಗಿದೆ ಎಂದು ಕರ್ನಾಟಕ ವೃತ್ತದ ಮುಖ್ಯ ಪೋಸ್ಟ್‌ಮಾಸ್ಟರ್ ಜನರಲ್ (ಸಿಪಿಎಂಜಿ) ಕೆ ಪ್ರಕಾಶ್ ಹೇಳಿದ್ದಾರೆ. "ಈ ನೋಟೀಸ್‌ಗಳು ಮತದಾರರ ಪಟ್ಟಿಯಲ್ಲಿರುವ ಬಹು ನಮೂದುಗಳ ತೆಗೆದುಹಾಕುವಿಕೆ ಮತ್ತು ರಾಜ್ಯದಿಂದ ಹೊರಗೆ ಸ್ಥಳಾಂತರಗೊಂಡಿದ್ದೂ ನಮ್ಮ ಪಟ್ಟಿಯಲ್ಲಿ ಇನ್ನೂ ಅವರ ಹೆಸರುಗಳನ್ನು ಹೊಂದಿರುವ ಮತದಾರರ ಬಗ್ಗೆ ವ್ಯವಹರಿಸುತ್ತದೆ. ನಾವು ಒಂದು ವಾರದ ಅವಧಿಯಲ್ಲಿ 4.5 ಲಕ್ಷ ನೋಟಿಸ್‌ಗಳ ಬುಕಿಂಗ್‌ಗಳನ್ನು ಸ್ವೀಕರಿಸಿದ್ದೇವೆ. ಆಯೋಗದಿಂದ ಸರಿಸುಮಾರು 36 ಲಕ್ಷ ನೋಟಿಸ್‌ಗಳು ಬುಕ್ ಆಗುವ ನಿರೀಕ್ಷೆಯಿದೆ ಎಂದು ನಮಗೆ ತಿಳಿಸಲಾಗಿದೆ. ಅವೆಲ್ಲವನ್ನೂ ಕಡಿಮೆ ಅವಧಿಯಲ್ಲಿ ವಿತರಿಸಲಾಗುವುದು. ಸದ್ಯಕ್ಕೆ ಗರಿಷ್ಠ ಸಂಖ್ಯೆಯ ನೋಟಿಸ್‌ಗಳು ಬೆಂಗಳೂರು ದಕ್ಷಿಣ ಕ್ಷೇತ್ರಕ್ಕೆ ಬುಕ್ ಆಗಿವೆ ಎಂದು ಪ್ರಕಾಶ್ ತಿಳಿಸಿದ್ದಾರೆ.

### ಹತ್ತು ದಿನಗಳ ಕಾಲ ಸಾಂಗವಾಗಿ ನೆರವೇರಿದ ಕೊಪ್ಪಳ ಗವಿಶ್ರೀಗಳ ಪ್ರವಚನ ಮಾಲಿಕೆ

## ಬದುಕಿನ ಬವಣೆ ಬದಲಾಯಿಸಿದ ಆಧ್ಯಾತ್ಮ ಪ್ರವಚನ

ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ಜರುಗಿದ ಆಧ್ಯಾತ್ಮಿಕ ಪ್ರವಚನ ಸಹಸ್ರಾರು ಜನಗಳಿಂದ ಬದುಕಿನ ದೇವಾಲಯವೇ ಆಗಿತ್ತು. ತಂಡೋಪತಂಡವಾಗಿ ಬರುವ ಭಕ್ತರು ತಮ್ಮ ಕಷ್ಟಗಳನ್ನು ಮರೆತು ಒಂದು ಗಂಟೆಯ ಕಾಲ ಪ್ರವಚನ ಶ್ರವಣ ಮಾಡಿದ ಮೇಲೆ, ನಾವು ಬದಲಾಗಬೇಕು, ಪೂಜ್ಯ ಗವಿಶ್ರೀಗಳ ನುಡಿಗಳು ನಮ್ಮನ್ನು ಬದಲಾಯಿಸಿವೆ ಎಂದು ಎಲ್ಲರೂ ಹೇಳುತ್ತಿದ್ದರು. ಅವರ ಅನುಭಾವದ ನುಡಿಗಳು ಎಲ್ಲರನ್ನು ಪರೀಕ್ಷೆಗೆ ಒಳಪಡಿಸಿತು.

ಹತ್ತು ದಿನಗಳ ಕಾಲ ನಡೆದ ಪ್ರವಚನಕ್ಕೆ ಗದಗ ಜಿಲ್ಲೆಯ ಮತ್ತು ಸುತ್ತ ಮುತ್ತಲಿನ ಜಿಲ್ಲೆಯ ಜನರು ಆಗಮಿಸಿ ಮೆರಗು ತಂದಿರುವುದು ವಿಶೇಷವಾದ ಸಂಗತಿ. ಪ್ರವಚನದಲ್ಲಿ ಹಲವಾರು ದೃಷ್ಟಾಂತ, ಕಥೆಗಳು ಹಾಗೂ ಸ್ಫೂರ್ತಿದಾಯಕ ವ್ಯಕ್ತಿಗಳ ಬದುಕಿನ ಚಿತ್ರಣಗಳು ಹಾಸ್ಯ ಮಿಶ್ರಿತದಿಂದ ಕೂಡಿ, ಘನತತ್ವವನ್ನು ತಿಳಿ ಹೇಳಿದ ಗವಿಶ್ರೀಗಳಿಗೆ ಅನಂತ ಕೋಟಿ ನಮನಗಳು. ಬೇಡವಾದ ವಿಚಾರವನ್ನು ತ್ಯಜಿಸಿ, ಮತ್ತು ಸಜ್ಜನ ಸಂಘದಿಂದ, ವಿವೇಕದಿಂದ ಬದುಕನ್ನು ಭವ್ಯಗೊಳಿಸಬೇಕು. ಮನಸ್ಸಿನ ನಿಯಂತ್ರಣ ಅತ್ಯವಶ್ಯ. ನಿಸರ್ಗ ದೃಷ್ಟಿಯಲ್ಲಿ ಎಲ್ಲರೂ ಸಮಾನರು. ಚಂಚಲ ಮನಸ್ಸಿನಿಂದ ದೂರವಾಗಿ ಪರಿಶ್ರಮ ಪ್ರವೃತ್ತಿ ಬೇಕೆಂದು ಹೇಳುತ್ತಾ ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಮತ್ತು ಚಿಕ್ಕ ಪಡಸಲಗಿಯ ಹಳ್ಳಿಯ ಜನ ಸ್ವತಃ ಡ್ಯಾಂ ಕಟ್ಟಿದ ಉದಾಹರಣೆಯೊಂದಿಗೆ ವಿವರಿಸಿದರು.

ನಮ್ಮ ಸ್ವರ್ಗ ಸಮಾನವಾದ ವಸುಂಧರೆಯಲ್ಲಿ ನಾವು ಬದುಕಲು ಸಾಧ್ಯವಾಗದಿದ್ದರೆ ಬದುಕೇ ವ್ಯರ್ಥವೆಂದು ಹೇಳಿದರು. ಶ್ರೀಮಂತನೆಂದರೆ ಹಣವಿರುವವನಲ್ಲ, ದುಡಿಯಲು ಕೈಕಾಲು ಗಟ್ಟಿ ಇಟ್ಟು ಕೊಂಡವ ಶ್ರೀಮಂತ ಎಂದು ಹೇಳುತ್ತಾ ಮುಖದಲ್ಲಿ ಮುಗಳ್ನಗೆ ಇರಲಿ, ಪರನಿಂದನೆ ಮಾಡದಿರುವುದು ಸತ್ಕರ್ಮಗಳು ಎಂದು ಆಶೀರ್ವಚನ ಮಾಡಿದರು.

ಸುವಿಚಾರಗಳನ್ನು ಹೇಳುತ್ತಾ ಈಶ್ವರ ಚಂದ್ರ ವಿದ್ಯಾಸಾಗರ, ಅಲ್ಫ್ರೆಡ್ ನೋಬೆಲ್ ಇವರ ಉದಾಹರಣೆ ಕೊಡುತ್ತಾ, ಅವರ ಜೀವನದಲ್ಲಿ ಆದ ಘಟನೆಗಳನ್ನು ಪರಿಣಾಮಕಾರಿಯಾಗಿ ತಿಳಿಸಿದರು. ಭಾವ–ಬಂಧನಕ್ಕೆ 'ನಾನು' ಎನ್ನುವುದು ಬಂಧನ 'ನೀನು' ಎನ್ನುವ ಭಾವ ಮುಕ್ತಿಗೆ ಸೋಪಾನ ಎಂದು ತಿಳಿಸುತ್ತಾ ನಾವೆಲ್ಲಾ



ಕಲಾವಿದರು, ದೇವರು ವಹಿಸಿದ ಪಾತ್ರಗಳು ಮಾಡಿ ಮುಗಿಸಬೇಕು. ಅತಿಥಿಗಳಂತೆ ಬದುಕನ್ನು ನಡೆಸಬೇಕು. ಹೃದಯದ ಪಾತ್ರೆಯನ್ನು ದೊಡ್ಡದಾಗಿಸಿಕೊಳ್ಳಬೇಕು. ಬದಲಾವಣೆ ಬದುಕಿನ ಸತ್ಯ, ಕಹಿಯನ್ನು ಮರೆತು ಮುನ್ನಡೆಯಬೇಕು. ಪ್ರೇಮ ಬದುಕಿನ ಮುಖ್ಯವಾದ ಅಂಶ. ಪ್ರೇಮವಿಲ್ಲದಿದ್ದರೆ ನಿತ್ಯ ತೃಪ್ತನಾಗಲು ಸಾಧ್ಯವಿಲ್ಲ. ತೋರಿ ಮರೆಯಾಗುವುದು ಜಗತ್ತು. ತೋರದೆ ಎಂದೆಂದೂ ಇರುವುದು ಪರಮಾತ್ಮ ಅದು ಪರಮ ಸತ್ಯ. ಅಂತಹ ಸತ್ಯದ ಪರಮ ಪ್ರೇಮವೇ ಭಕ್ತಿ. ಪರಮ ಅನುಭವಿಗಳೆಲ್ಲಾ ಭಕ್ತಿಯ ಮಾತುಗಳನ್ನಾಡಿದ್ದಾರೆ. ಪ್ರಪಂಚದ ಎಲ್ಲಾ ಮಹಾತ್ಮರ ಉಪದೇಶದಲ್ಲಿ ಪ್ರೇಮರಸ ಒಂದೇ ರೀತಿಯಾಗಿ ಪ್ರವಹಿಸಿದೆ.

ಬಹಿರಂಗದಲ್ಲಿ ಮಾತ್ರವಲ್ಲ, ಅಂತರಂಗದಲ್ಲೂ ಸಿರಿವಂತನಾಗಿರಬೇಕು. ಹೊರಗಿನ ಸಿರಿಯನ್ನು ಯಾರಾದರೂ ಕಸಿಯಬಹುದು. ನಮ್ಮ ಅಂತರಂಗದ ಸಿರಿಯನ್ನು ಕಸಿಯಲು ಸಾಧ್ಯವಿಲ್ಲ. ಮಾನವನ ಬದುಕೇ ಕ್ಯಾನ್ವಸ್ ಬಟ್ಟೆ ಇದ್ದಂತೆ. ಆಯುಷ್ಯವೇ ಕುಂಚ, ವೈವಿಧ್ಯಮಯವಾದ ವಿಚಾರಗಳು ಮತ್ತು ಭಾವನೆಗಳೇ ಬಣ್ಣ. ಇವುಗಳನ್ನು ಬಳಸಿಕೊಂಡು ಸುಂದರವಾದ ಚಿತ್ರಗಳನ್ನು ನಾವು ಬರೆಯಬಹುದೆಂದು ಹೇಳತ್ತಾ ಅನೇಕ ಸಂತರ ಶರಣರ ವಚವನಗಳನ್ನು ಎಳೆ ಎಳೆಯಾಗಿ ಬಿಚ್ಚಿಡುತ್ತಾ, ಎಲ್ಲಾ ಭಕ್ತಾಧಿಗಳ ಮನಸ್ಸನ್ನು ಅಲೌಕಿಕ ಪ್ರಪಂಚದ ಕಡೆಗೆ ಕೊಂಡ್ಯೊಯ್ದರು.

ನಿಸರ್ಗವು ಮನುಷ್ಯನಿಗೆ ಉಣಿಸಿ, ತಿನಿಸಿ, ಸಂತಸ ಪಡುತ್ತದೆ. ಮನುಷ್ಯ ಬರೀ ಗಳಿಸಿ, ಉಳಿಸಿ ಸಂತಸ ಪಡಬೇಕೆನ್ನುತ್ತಾನೆ. ಆದರೆ ಮನುಷ್ಯನು ನೈಜ ಸಂತಸದಿಂದ ವಂಚಿತನಾಗುತ್ತಾನೆ. ನೆಲ, ಜಲ, ಗಾಳಿ, ಬೆಳಕು ಹಾಗೂ ಬಯಲಿನಿಂದಾದ ಈ ನಿಸರ್ಗ ಸಿರಿಯನ್ನು ಬಿಟ್ಟರೆ ನಮ್ಮ ಬದುಕೇ ನಡೆಯದು! ನಿಸರ್ಗವನ್ನು ನಾವು ಅನುಸರಿಸಿದರೆ, ಜ್ಞಾನದ ಗುಣಗಳನ್ನು ಸಂಪಾದಿಸಿದ್ದಾದರೆ, ನಮಗೆ ಸಂತಸದ ಸಾಮ್ರಾಜ್ಯ ಕಾದಿದೆ. ಬದುಕು ದಿವಾಳಿಯಾಗುವುದಿಲ್ಲ, ದೀವಳಿಗೆಯಾಗುತ್ತದೆ. ಸಮಯಕ್ಕೆ ಸರಿಯಾಗಿ ನಡೆದ ಪ್ರವಚನ ಸಮಯ ಪ್ರಜ್ಞೆಯನ್ನು ಮೂಡಿಸುತ್ತದೆ. ಬೆಳಿಗ್ಗೆ ನಡೆದ ಪಾದಯಾತ್ರೆಯೂ ಅದ್ಭುತ. ಪೂಜ್ಯ ಗವಿಶ್ರೀಗಳ ಪ್ರವಚನ ನಮ್ಮ ಬದುಕನ್ನು ಬದಲಾವಣೆಗೊಳಿಸುವುದು ಖಂಡಿತಾ. ಅವರಿಗೆ ಸರ್ವ ಭಕ್ತರ ಪರವಾಗಿ ಅನಂತ ಕೋಟಿ ನಮನಗಳನ್ನು ಸಲ್ಲಿಸುತ್ತೇನೆ.

ಪ್ರವಚನ ಸಮಾರಂಭದಲ್ಲಿ ಬಳಗಾನೂರಿನ ಶಿವಶಾಂತವೀರ ಸ್ವಾಮೀಜಿ ಸುಶ್ರಾವ್ಯವಾಗಿ ಭಜನೆಗೈದರು. ಇಂತಹ ಸುಸಂಧರ್ಭವನ್ನು ಗದಗ ಜಿಲ್ಲೆಯ ಜನತೆಗೆ ಒದಗಿಸಿಕೊಟ್ಟ ಮಾಜಿ ಶಾಸಕರು, ಹಾಗೂ ಸಂತ ರಾಜಕಾರಣಿಗಳಾದ ಡಿ.ಆರ್. ಪಾಟೀಲ ಹಾಗೂ ಅವರಿವರೆನ್ನದೆ ಎಲ್ಲಾ ಸಮಾಜ ಮುಖಂಡರಿಗೂ ಹಾಗೂ ಎಲ್ಲಾ ಭಕ್ತಾದಿಗಳಿಗೂ ಧನ್ಯವಾದಗಳೊಂದಿಗೆ ಅನಂತ ನಮಸ್ಕಾರಗಳನ್ನು ಸಲ್ಲಿಸುತ್ತೇನೆ.

– ಅನಿಲ ವೈದ್ಯ, ಗದಗ.

## ವಿಡಿಎಸ್ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಕನಕದಾಸ ಜಯಂತಿ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಪ್ರಾಥಮಿಕ ಹಾಗೂ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಭಕ್ತ ಕನಕದಾಸ ಜಯಂತಿಯನ್ನು ಆಚರಿಸಲಾಯಿತು.

ಮುಖ್ಯೋಪಾಧ್ಯಾಯ ಎಂ.ಆರ್. ಡೊಳ್ಳಿನ ಕನಕದಾಸರ ಭಾವಚಿತ್ರಕ್ಕೆ ಹೂ ಮಾಲೆ ಅರ್ಪಿಸಿ, ಪೂಜೆ ಸಲ್ಲಿಸಿ ಮಾತನಾಡಿ, ಕನಕದಾಸರು ತಮ್ಮ ಸಾಹಿತ್ಯದ ಮೂಲಕ ಸಮಾಜದ ಅಂಕು–ಡೊಂಕು ತಿದ್ದುವ ಕೆಲಸ ಮಾಡಿದ್ದಾರೆ. ಇವರ ದಾಸ ಸಾಹಿತ್ಯದಿಂದ ಕನ್ನಡ ಭಾಷೆಯ ಶ್ರೀಮಂತಿಕೆ ಹೆಚ್ಚಿದೆ. ಇಂತಹ ಮಹಾ ಸಂತರ ಜೀವನ ಚರಿತ್ರೆಯನ್ನು ಓದುವುದರ ಮೂಲಕ ಇವರ ಆದರ್ಶ ಮೌಲ್ಯಗಳನ್ನು ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಶಿಕ್ಷಕಿ ಸುಮಂಗಲಾ ಆಸಂಗಿ ಮಾತನಾಡಿ, ಸಂತ ಕನಕದಾಸರ ಜೀವನ ಮತ್ತು ಸಾಧನೆ ಕುರಿತು ಮಕ್ಕಳಿಗೆ ಸರಳ ಸಂಕ್ಷಿಪ್ತವಾಗಿ ತಿಳಿಸಿದರು. ಶೋಭಾ ಪೂಜಾರ, ವನಿತಾ ಡೊಳ್ಳಿನ, ಸಾಹೀಲ್ ಮುಲ್ಲಾ ಹಾಗೂ ನರೇಶ ಇದ್ಲಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ಶಿಕ್ಷಕಿ ರೇಣುಕಾ ವೆಂಕಟಾಪುರ, ವಿದ್ಯಾರ್ಥಿಗಳಾದ ಕೆ.ಎನ್. ಕಾವ್ಯಶ್ರೀ ಹಾಗೂ ಸಂಗಡಿಗರು ಸಂತ ಕನಕದಾಸರ ಕೀರ್ತನೆಗಳನ್ನು ಹಾಡಿದರು. ಅನನ್ಯ ಬಿದರಕುಂದಿ ಪ್ರಾರ್ಥನೆ ಹಾಡಿದರು. ವೀಣಾ ನಾಯಕ ಸ್ವಾಗತಿಸಿದರು. ಗಾಯತ್ರಿ ಅಸುಂಡಿ ನಿರೂಪಿಸಿದರು. ಪಾರ್ವತಿ ಕಟ್ಟಿಮನಿ ವಂದಿಸಿದರು.

## ಕನಕದಾಸರು ಕನ್ನಡ ನಾಡಿನ ಹೆಮ್ಮೆಯ ಕವಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಭಕ್ತ ಕನಕದಾಸರು ನಮ್ಮ ಕನ್ನಡ ನಾಡಿನ ಹೆಮ್ಮೆಯ ಕವಿ. ಅವರ ಕೀರ್ತನೆಗಳನ್ನು ಅಧ್ಯಯನ ಮಾಡಿದಾಗ ಜೀವನ ದರ್ಶನ ನಮಗಾಗುತ್ತದೆ. ಹೀಗಾಗಿ, ನಿತ್ಯವೂ ಒಂದಾದರೂ ಕೀರ್ತನೆಯನ್ನು ಓದುವ ರೂಢಿಯನ್ನು ನಾವು ಬೆಳೆಸಿಕೊಳ್ಳಬೇಕೆಂದು ನರೇಗಲ್ಲ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ರಮೇಶ ಹೊಸಮನಿ ಅಭಿಪ್ರಾಯಪಟ್ಟರು.

ಇಲ್ಲಿನ ಪ.ಪಂ ಸಭಾಭವನದಲ್ಲಿ ಗುರುವಾರ ಜರುಗಿದ ಭಕ್ತ ಕನಕದಾಸರ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ಕನಕದಾಸರು ಕೇವಲ ಕವಿಯಾಗಿರದೆ, ತತ್ವಜ್ಞಾನಿ, ಸಂಗೀತಗಾರ, ಸಂಯೋಜಕ, ಸಮಾಜ ಸುಧಾರಕ ಮತ್ತು ಸಂತರಾಗಿದ್ದರು. ದಾಸ ಸಾಹಿತ್ಯದ ಮೂಲಕ ಜೀವನ ಪಾಠ ಸಾರಿದವರು ಕನಕದಾಸರು. ಜಾತಿ, ಮತ, ಕುಲಗಳ ಬೇಧ–ಭಾವವನ್ನು ಮೀರಿಸುವಂತೆ ಸಮಾಜದ ಪಿಡುಗುಗಳ ಬಗ್ಗೆ ಜನ ಸಾಮಾನ್ಯರಿಗೆ ಅರ್ಥವಾಗುವ ಭಾಷೆಯಲ್ಲಿ ತಿಳಿಸಿ ಸಾಮಾಜಿಕ ಕ್ರಾಂತಿಯನ್ನೇ ಮಾಡಿದ ಸಂತವರೇಣ್ಯರು ಎಂದರು.

ಮುತ್ತಪ್ಪ ನೂಲ್ಕಿ, ಈರಪ್ಪ ಜೋಗಿ, ಮಲ್ಲಿಕಸಾಬ ರೋಣದ, ಅಕ್ಕಮ್ಮ ಮಣ್ಣೊಡ್ಡರ, ದಾವುದಲಿ ಕುದರಿ, ನಿಂಗಪ್ಪ ಚಲವಾದಿ, ಯಲ್ಲಪ್ಪ ಮಣ್ಣೊಡ್ಡರ, ರಮೇಶ ಹಲಗಿ, ವೆಂಕಟೇಶ ಮಡಿವಾಳರ, ಎಂ.ಎಚ್. ಸೀತಿಮನಿ, ಶಂಕ್ರಪ್ಪ ದೊಡ್ಡಣ್ಣವರ, ಎಂ.ಎಚ್. ಕಾತರಕಿ, ಶೇಖಪ್ಪ ಹೊನವಾಡ, ಶಶಿಧರ ಓದುಸುಮಠ, ಶರಣಪ್ಪ ಕುರಿ, ಶಿವಪ್ರಸಾದ ಮೆಣಸಗಿ, ಸಂಜು ಗುಡಿಮನಿ, ಉದಯ ಮುದೇನಗೂಡಿ, ಜೆ.ಎ. ಬಂಕಾಪೂರ ಸೇರಿದಂತೆ ಸಿಬ್ಬಂದಿಯವರು ಇದ್ದರು.

ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಭಕ್ತ ಕನಕದಾಸರು ನಮ್ಮ ಕನ್ನಡ ನಾಡಿನ ಹೆಮ್ಮೆಯ ಕವಿ. ಅವರ ಕೀರ್ತನೆಗಳನ್ನು ಅಧ್ಯಯನ ಮಾಡಿದಾಗ ಜೀವನ ದರ್ಶನ ನಮಗಾಗುತ್ತದೆ. ಹೀಗಾಗಿ, ನಿತ್ಯವೂ ಒಂದಾದರೂ ಕೀರ್ತನೆಯನ್ನು ಓದುವ ರೂಢಿಯನ್ನು ನಾವು ಬೆಳೆಸಿಕೊಳ್ಳಬೇಕೆಂದು ನರೇಗಲ್ಲ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ರಮೇಶ ಹೊಸಮನಿ ಅಭಿಪ್ರಾಯಪಟ್ಟರು.

ಇಲ್ಲಿನ ಪ.ಪಂ ಸಭಾಭವನದಲ್ಲಿ ಗುರುವಾರ ಜರುಗಿದ ಭಕ್ತ ಕನಕದಾಸರ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ಕನಕದಾಸರು ಕೇವಲ ಕವಿಯಾಗಿರದೆ, ತತ್ವಜ್ಞಾನಿ, ಸಂಗೀತಗಾರ, ಸಂಯೋಜಕ, ಸಮಾಜ ಸುಧಾರಕ ಮತ್ತು ಸಂತರಾಗಿದ್ದರು. ದಾಸ ಸಾಹಿತ್ಯದ ಮೂಲಕ ಜೀವನ ಪಾಠ ಸಾರಿದವರು ಕನಕದಾಸರು. ಜಾತಿ, ಮತ, ಕುಲಗಳ ಬೇಧ–ಭಾವವನ್ನು ಮೀರಿಸುವಂತೆ ಸಮಾಜದ ಪಿಡುಗುಗಳ ಬಗ್ಗೆ ಜನ ಸಾಮಾನ್ಯರಿಗೆ ಅರ್ಥವಾಗುವ ಭಾಷೆಯಲ್ಲಿ ತಿಳಿಸಿ ಸಾಮಾಜಿಕ ಕ್ರಾಂತಿಯನ್ನೇ ಮಾಡಿದ ಸಂತವರೇಣ್ಯರು ಎಂದರು.

ಮುತ್ತಪ್ಪ ನೂಲ್ಕಿ, ಈರಪ್ಪ ಜೋಗಿ, ಮಲ್ಲಿಕಸಾಬ ರೋಣದ, ಅಕ್ಕಮ್ಮ ಮಣ್ಣೊಡ್ಡರ, ದಾವುದಲಿ ಕುದರಿ, ನಿಂಗಪ್ಪ ಚಲವಾದಿ, ಯಲ್ಲಪ್ಪ ಮಣ್ಣೊಡ್ಡರ, ರಮೇಶ ಹಲಗಿ, ವೆಂಕಟೇಶ ಮಡಿವಾಳರ, ಎಂ.ಎಚ್. ಸೀತಿಮನಿ, ಶಂಕ್ರಪ್ಪ ದೊಡ್ಡಣ್ಣವರ, ಎಂ.ಎಚ್. ಕಾತರಕಿ, ಶೇಖಪ್ಪ ಹೊನವಾಡ, ಶಶಿಧರ ಓದುಸುಮಠ, ಶರಣಪ್ಪ ಕುರಿ, ಶಿವಪ್ರಸಾದ ಮೆಣಸಗಿ, ಸಂಜು ಗುಡಿಮನಿ, ಉದಯ ಮುದೇನಗೂಡಿ, ಜೆ.ಎ. ಬಂಕಾಪೂರ ಸೇರಿದಂತೆ ಸಿಬ್ಬಂದಿಯವರು ಇದ್ದರು.

## ಸನ್ಮಾರ್ಗ ಮಹಾವಿದ್ಯಾಲಯದಲ್ಲಿ ಕನಕದಾಸ ಜಯಂತಿ

■ವಿಜಯಸಾಕ್ಷಿ ಸುದ್ದಿ,ಗದಗ

ಸಮಾಜದಲ್ಲಿನ ಓರೆ–ಕೋರೆಗಳನ್ನು ಅಂದಿನ ಸಾಂಪ್ರದಾಯಿಕ ದಿನಗಳಲ್ಲಿಯೇ ನಿರ್ಭೀತಿಯಿಂದ ತಿದ್ದಿ ನಮಗೆಲ್ಲರಿಗೂ ಸನ್ಮಾರ್ಗ ತೋರಿದವರು ಭಕ್ತ ಕನಕದಾಸರು ಎಂದು ಪ್ರೊ. ರಾಜೇಶ ಕುಲಕರ್ಣಿ ಅಭಿಪ್ರಾಯಪಟ್ಟರು.

ಇಲ್ಲಿನ ಸನ್ಮಾರ್ಗ ಪ.ಪೂ ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಜರುಗಿದ ಮಹಾಭಕ್ತ ಕನಕದಾಸರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪ್ರಾಚಾರ್ಯ ಪ್ರೇಮಾನಂದ ರೋಣದ ಮಾತನಾಡಿ, ಜಗತ್ತಿನಲ್ಲಿ ಇರುವ ಜಾತಿ ಎರಡೇ, ಒಂದು ಗಂಡು ಮತ್ತೊಂದು ಹೆಣ್ಣು. ಆದರೆ ನಾವು ಇಲ್ಲ ಸಲ್ಲದ ಜಾತಿಗಳನ್ನು



ಮಾಡಿಕೊಂಡು ಸಮಾಜದ ಸಾಮರಸ್ಯಕ್ಕೆ ಭಂಗ ತರುತ್ತಿದ್ದೇವೆ. ಕನಕದಾಸರು ಹೇಳಿದ ಹಾಗೆ ಈ ಜಾತಿ ಭ್ರಮಣೆ ನಮ್ಮಿಂದ ತೊಲಗಿದಾಗ ಮಾತ್ರ ನಮ್ಮ ದೇಶದಲ್ಲಿ ಅಭಿವೃದ್ಧಿ ಸಾಧ್ಯ ಎಂದರು.

ಪ್ರಾರಂಭದಲ್ಲಿ ಆಡಳಿತಾಧಿಕಾರಿ ಎಮ್.ಸಿ. ಹಿರೇಮಠರ ನೇತೃತ್ವದಲ್ಲಿ ಕನಕದಾಸರ ಭಾವಚಿತ್ರಕ್ಕೆ ಪೂಜೆ ನೆರವೇರಿತು. ಆಡಳಿತ ಮಂಡಳಿಯ ಸದಸ್ಯರಾದ ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ರೋಹಿತ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ್, ಬೋಧಕ/ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಪ್ರೊ. ಡಿ.ಬಿ. ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿದರು. ಪ್ರೊ. ಪಿ.ಡಿ. ಕೊಟ್ನಿಕಲ್ ವಂದಿಸಿದರು.

## ಸತತ ಪರಿಶ್ರಮದಿಂದ ಉತ್ತಮ ಪ್ರಜೆಗಳಾಗಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳಲ್ಲಿ ಸದೃಢ ಮನಸ್ಸು ನಿರ್ಮಾಣವಾಗುವುದರಿಂದ ಉತ್ತಮ ಸಮಾಜ ನಿರ್ಮಿಸಲು ಸಹಕಾರಿಯಾಗುತ್ತದೆ ಎಂದು ಉದ್ಯಮಿ ಅಶೊಕ ಸೊನೊಗೋಜಿ ಹೇಳಿದರು.

ಅವರು ಪಟ್ಟಣದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಬಿ.ಎ, ಬಿ.ಕಾಂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಹಾಗೂ 2023/24ನೇ ಶೈಕ್ಷಣಿಕ ಸಾಲಿನ ಸಾಂಸ್ಕೃತಿಕ, ಕ್ರೀಡೆ, ಹಾಗೂ ಎನ್.ಎಸ್.ಎಸ್, ರೆಡ್ ಕ್ರಾಸ್, ಮತ್ತು ರೋವರ್ಸ್–ರೇಂಜರ್ಸ್ ಘಟಕಗಳ ಉದ್ಘಾಟನಾ ಕಾರ್ಯಕ್ರಮದಲ್ಲಿ



ಮಾತನಾಡಿದರು.

ಗದಗ ಸ.ಪ್ರ.ದ ಕಾಲೇಜು ಪ್ರಾಚಾರ್ಯ ಡಾ. ಎಸ್.ಎಫ್. ಸಿದ್ನೆಕೊಪ್ಪ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಆರ್.ಎನ್. ದೇಶಪಾಂಡೆ ಕಾಲೇಜು ಇಂದು ಹೆಮ್ಮರವಾಗಿ ಬೆಳೆದು ಬಡ ಮಕ್ಕಳಿಗೆ ನೆರಳು ನೀಡಲು ದಿ.ಆರ್.ಎನ್. ದೇಶಪಾಂಡೆ ಅವರ ಸೇವೆ ಕಾರಣವಾಗಿದೆ. ದಿ.ಸಿ.ಬಿ. ಬಡ್ನಿ ಅವರ ಶಿಕ್ಷಣ ಪ್ರೇಮದಿಂದ ಸರಕಾರಿ ಕಾಲೇಜು ನಿರ್ಮಾಣವಾಗಿದ್ದು ಮಕ್ಕಳು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ಆರ್.ಎಂ. ಕಲ್ಲನಗೌಡರ ಮಾತನಾಡಿ, ತಂದೆ–ತಾಯಿಗಳ ಕನಸು, ಆಸೆ, ಉಪನ್ಯಾಸಕರ ಶ್ರಮವನ್ನು ವ್ಯರ್ಥ ಮಾಡದೇ ಮಕ್ಕಳು ಸತತ ಪರಿಶ್ರಮದಿಂದ ಉತ್ತಮ ಪ್ರಜೆಗಳಾಗಿ ಕಾಲೇಜಿಗೆ ಕೀರ್ತಿ ತರಬೇಕು ಎಂದರು.

ಗೀತಾಂಜಲಿ.ಆರ್, ವಿನಾಯಕ ಶಿರಬಡಿಗಿ, ಪ್ರಸನ್.ಎಸ್, ಅನುಪಮಾ, ಕಾಲೇಜು ಆಡಳಿತ ಮಂಡಳಿ, ಬೋಧಕ/ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಇದ್ದರು.

## ಕಾಂಗ್ರೆಸ್ ಕಾರ್ಯಕರ್ತರಿಗೆ ನಿಗಮ ಮಂಡಳಿ ಸ್ಥಾನ ನೀಡಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ



ಸಿಎಂ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ ಅವರು ರಾಜ್ಯ ನಿಗಮ ಮಂಡಳಿಗೆ ಪಕ್ಷದ ಕಾರ್ಯಕರ್ತರು ಹಾಗೂ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರನ್ನು ನೇಮಿಸಲು ಮುಂದಾಗಬೇಕು ಎಂದು ರೋಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವೀರಣ್ಣ ಶೆಟ್ಟರ ಆಗ್ರಹಿಸಿದ್ದಾರೆ.

ಈ ಕುರಿತು ಪಟ್ಟಣದ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಜನತೆಯ ಆಶೀರ್ವಾದ ಹಾಗೂ ಪಕ್ಷದ ಕಾರ್ಯಕರ್ತರ ಶ್ರಮದಿಂದಾಗಿ ಕಾಂಗ್ರೆಸ್ ಪಕ್ಷವು ಐತಿಹಾಸಿಕ ಜಯ ಸಾಧಿಸಿ 6 ತಿಂಗಳು ಗತಿಸಿದೆ. ಚುನಾವಣಾ ವೇಳೆ ಕಾಂಗ್ರೆಸ್ ಘೋಷಿಸಿದ ಗ್ಯಾರಂಟಿಗಳನ್ನು ಈಡೇರಿಸುತ್ತೇವೆ ಎಂದು ಜನತೆಯ ಮನೆ ಬಾಗಿಲಿಗೆ ತೆರಳಿ ತಿಳಿಸುವುದರೊಂದಿಗೆ ಅಂದಿನ ಬಿಜೆಪಿ ಸರ್ಕಾರದ ದುರಾಡಳಿತವನ್ನು ಜನತೆಗೆ ಮುಟ್ಟಿಸುವಲ್ಲಿ ಕಾಂಗ್ರೆಸ್ ಕಾರ್ಯಕರ್ತರ ಶ್ರಮ ಅನ್ಯನವಾದದ್ದು.

ಜನತೆಯ ವಿಶ್ವಾಸದೊಂದಿಗೆ ರೋಣ ಮತಕ್ಷೇತ್ರದಲ್ಲಿ ಪಕ್ಷದ ಅಭ್ಯರ್ಥಿಯಾದ ಜಿ.ಎಸ್. ಪಾಟೀಲ ಅವರನ್ನು ಶಾಸಕರನ್ನಾಗಿ ಆಯ್ಕೆ ಮಾಡುವಲ್ಲಿ ರೋಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷನಾಗಿ ಹಾಗೂ ಸಾಕಷ್ಟು ಕಾರ್ಯಕರ್ತರು ಅವಿರತ ಶ್ರಮ ವಹಿಸಿದ್ದಾರೆ.

ಆದರೆ ಈಗ ನಿಗಮ ಮಂಡಳಿಯ ಸ್ಥಾನಮಾನಕ್ಕೆ ಕೇವಲ ಶಾಸಕರನ್ನು ಪರಿಗಣಿಸಲು ಮುಂದಾಗುತ್ತಿರುವುದು ಕಾರ್ಯಕರ್ತರ ಅಸಮಾಧಾನಕ್ಕೆ ಕಾರಣವಾಗಿದೆ ಎಂದ ಅವರು, ಸರ್ಕಾರ ಮತ್ತು ಪಕ್ಷವು ನಿಗಮ ಮಂಡಳಿ ಸ್ಥಾನಮಾನವನ್ನು ನೀಡುವಾಗ ಕಾರ್ಯಕರ್ತರನ್ನು ಪರಿಗಣಿಸಬೇಕು ಎಂದು ಒತ್ತಾಯಿಸಿದರು.

## 4 ರಾಜ್ಯಗಳ ಚುನಾವಣೆ ಫಲಿತಾಂಶ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಇನ್ನು ಕೆಲವೇ ತಿಂಗಳಲ್ಲಿ ನಡೆಯಲಿರುವ ಲೋಕಸಭೆ ಚುನಾವಣೆಗೆ ಸೆಮಿಫೈನಲ್ ಎಂದೇ ಪರಿಗಣಿಸಲಾಗಿರುವ ಮಧ್ಯಪ್ರದೇಶ, ರಾಜಸ್ಥಾನ, ಛತ್ತೀಸ್‌ಗಢ ಮತ್ತು ತೆಲಂಗಾಣ ವಿಧಾನಸಭೆ ಚುನಾವಣೆಯ ಫಲಿತಾಂಶ ಭಾನುವಾರ ಪ್ರಕಟವಾಗಲಿದೆ.

ರಾಜಸ್ಥಾನ ಮತ್ತು ಛತ್ತೀಸ್‌ಗಢದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಮತ್ತು ಮಧ್ಯಪ್ರದೇಶದಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ ನಡುವೆ ಈ ಮೂರು ರಾಜ್ಯಗಳಲ್ಲಿ ನೇರ ಹಣಾಹಣಿ ಇದೆ. ತೆಲಂಗಾಣದಲ್ಲಿ ಕೆ ಚಂದ್ರಶೇಖರ್ ರಾವ್ ನೇತೃತ್ವದ ಭಾರತ್ ರಾಷ್ಟ್ರ ಸಮಿತಿ(ಬಿಆರ್‌ಎಸ್) ಹ್ಯಾಟ್ರಿಕ್ ಗೆಲುವಿನ ನಿರೀಕ್ಷೆಯಲ್ಲಿದೆ.

ತೆಲಂಗಾಣ ಮತ್ತು ಛತ್ತೀಸ್‌ಗಢದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂದು ಹಲವು ಚುನಾವಣೋತ್ತರ ಸಮೀಕ್ಷೆಗಳು ಭವಿಷ್ಯ ನುಡಿದಿದ್ದು, ಮಧ್ಯಪ್ರದೇಶ ಮತ್ತು ರಾಜಸ್ಥಾನದಲ್ಲಿ ಬಿಜೆಪಿ – ಕಾಂಗ್ರೆಸ್ ನಡುವೆ ತೀವ್ರ ಪೈಪೋಟಿ ಇದೆ ಎಂದು ಹೇಳಿವೆ.

ಮಧ್ಯಪ್ರದೇಶದ 230, ಛತ್ತೀಸ್‌ಗಢದ 90, ತೆಲಂಗಾಣದ 119 ಮತ್ತು ರಾಜಸ್ಥಾನದ 199 ಸ್ಥಾನಗಳಿಗೆ ಚುನಾವಣೆ ನಡೆದಿದ್ದು, ನಾಳೆ ಬೆಳಗ್ಗೆ 8 ಗಂಟೆಗೆ ಬಿಗಿ ಭದ್ರತೆಯ ನಡುವೆ ಅಂಚೆ ಮತಪತ್ರಗಳ ಎಣಿಸುವ ಮೂಲಕ ಮತ ಎಣಿಕೆ ಆರಂಭವಾಗಲಿದೆ. ಅಭ್ಯರ್ಥಿ ಸಾವನ್ನಪ್ಪಿದ ಕಾರಣ ರಾಜಸ್ಥಾನದಲ್ಲಿ ಒಂದು ಕ್ಷೇತ್ರದ ಮತದಾನವನ್ನು ಮುಂದೂಡಲಾಗಿದೆ.

ಮತ ಎಣಿಕೆಗೆ ಮೂರು ಹಂತದ ಭದ್ರತಾ ವ್ಯವಸ್ಥೆ ಮಾಡಲಾಗಿದ್ದು, ಪಾಸ್ ಹೊಂದಿರುವವರಿಗೆ ಮಾತ್ರ ಮತ ಎಣಿಕೆ ಕೇಂದ್ರಗಳಿಗೆ ಪ್ರವೇಶ ನೀಡಲಾಗುವುದು ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ಕರ್ನಾಟಕದಲ್ಲಿ ಕಳೆದ ಮೇ ತಿಂಗಳಲ್ಲಿ ಬಿಜೆಪಿಯಿಂದ ಅಧಿಕಾರ ಕಿತ್ತುಕೊಂಡ ಕಾಂಗ್ರೆಸ್ ಈಗ, ಮಧ್ಯಪ್ರದೇಶ ಮತ್ತು ತೆಲಂಗಾಣದ ಮೇಲೆ ಕಣ್ಣಿಟ್ಟಿದೆ. ಅಲ್ಲದೆ ರಾಜಸ್ಥಾನ ಮತ್ತು ಛತ್ತೀಸ್‌ಗಢದಲ್ಲಿ ಅಧಿಕಾರ ಉಳಿಸಿಕೊಳ್ಳುವ ನಿರೀಕ್ಷೆಯಲ್ಲಿದೆ.

## ವಸಿಷ್ಠ ಕೋ-ಆಪರೇಟಿವ್ ಸೊಸೈಟಿ ಹಗರಣ, ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ಅಕ್ರಮ ಸಿಬಿಐಗೆ ವಹಿಸಿದ ರಾಜ್ಯ ಸರ್ಕಾರ




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಸಿಷ್ಠ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ವಂಚನೆ ಪ್ರಕರಣ ಹಾಗೂ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ಅವ್ಯವಹಾರದ ತನಿಖೆಯನ್ನು ಸಿಬಿಐಗೆ ವಹಿಸಿ ರಾಜ್ಯ ಸರ್ಕಾರ ಶನಿವಾರ ಆದೇಶ ಹೊರಡಿಸಿದೆ.

ಇದೇ ವರ್ಷ ಜನವರಿಯಲ್ಲಿ ಹಿಂದಿನ ಬಿಜೆಪಿ ಸರ್ಕಾರ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ಅಕ್ರಮವನ್ನು ಸಿಬಿಐ ತನಿಖೆಗೆ ವಹಿಸುವ ಬಗ್ಗೆ ಅಂದಿನ ಸಹಕಾರ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನಿರ್ಣಯ ತೆಗೆದುಕೊಳ್ಳಲಾಗಿತ್ತು. ಆದರೆ ಅದನ್ನು ಜಾರಿಗೊಳಿಸಿರಲಿಲ್ಲ. ಈಗ ರಾಜ್ಯ ಸರ್ಕಾರ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ಹಾಗೂ ವಸಿಷ್ಠ ಕೋ-ಆಪರೇಟಿವ್ ಸೊಸೈಟಿ ಹಗರಣವನ್ನು ಸಿಬಿಐ ವಹಿಸಿದೆ.

ಗುರು ರಾಘವೇಂದ್ರ ಬ್ಯಾಂಕಿನಲ್ಲಿ 1,500 ಕೋಟಿ ರೂ. ಅಕ್ರಮ ನಡೆದಿದೆ ಎಂಬ ಆರೋಪ ಕೇಳಿಬಂದಿದ್ದು, 38,000 ಗ್ರಾಹಕರನ್ನು ಸಂಕಷ್ಟಕ್ಕೆ ತಳ್ಳಿದೆ. ಗುರು ರಾಘವೇಂದ್ರ ಬ್ಯಾಂಕ್ ಒಂದೇ ದಿನದಲ್ಲಿ 90 ಖಾತೆಗಳಿಗೆ 60 ಕೋಟಿ ರೂ. ಮೌಲ್ಯದ ಸಾಲಗಳನ್ನು ಬಿಡುಗಡೆ ಮಾಡಿದೆ ಎಂದು ಲೆಕ್ಕ ಪರಿಶೋಧನೆಯ ವರದಿ ಹೇಳಿದೆ.

ಇನ್ನು ಬೆಂಗಳೂರಿನ ಹನುಮಂತ ನಗರದಲ್ಲಿರುವ ವಸಿಷ್ಠ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿಯಿಂದ 450 ರಿಂದ 500 ಕೋಟಿ ವಂಚನೆ ನಡೆದಿದೆ. ಬ್ಯಾಂಕ್ ನ ಅಧ್ಯಕ್ಷರ ಕುಟುಂಬಕ್ಕೆ 100 ಕೋಟಿಗೂ ಹೆಚ್ಚಿನ ಸಾಲ ನೀಡಲಾಗಿದೆ. ಬ್ಯಾಂಕ್ ಅಧ್ಯಕ್ಷರ ಮಗನ ಹೆಸರಲ್ಲೇ ಅನೇಕ ರೀತಿಯ ಲೋನ್ ಗಳನ್ನ ನೀಡಲಾಗಿದೆ. ನೂರಾರು ಕೋಟಿ ಲೋನ್ ನೀಡಿದರೂ, ಯಾವುದೇ ದಾಖಲೆಗಳನ್ನು ಪಡೆದಿಲ್ಲ ಎಂದು ಗ್ರಾಹಕರು ಆರೋಪಿಸಿದ್ದಾರೆ.

### ಕಲ್ಮೇಶ್ವರ ಕಾಲೇಜಿನ ಪಠ್ಯೇತರ ಚಟುವಟಿಕೆಗಳನ್ನು ಉದ್ಘಾಟಿಸಿದ ಡಾ.ಸಿದ್ದಲಿಂಗೇಶ ಸಜ್ಜನಶೆಟ್ಟರ

## ಸುಪ್ತ ಪ್ರತಿಭೆಗಳ ಅಭಿವ್ಯಕ್ತಿಗೆ ಪಠ್ಯೇತರ ಚಟುವಟಿಕೆ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ರೋಣ

ಪಠ್ಯೇತರ ಚಟುವಟಿಕೆಗಳು ನಮ್ಮಲ್ಲಿ ಹುದುಗಿರುವ ಪ್ರತಿಭೆಯನ್ನು ಹೊರತೆಗೆಯಲು ನೆರವಾಗುತ್ತವೆ. ಚೆಸ್, ಕೇರಂ, ಕಬಡ್ಡಿ, ಕೋಕೋ, ವಾಲಿಬಾಲ್, ಕ್ರಿಕೆಟ್ ಹೀಗೆ ವಿವಿಧ ಒಳಾಂಗಣ ಮತ್ತು ಹೊರಾಂಗಣ ಆಟಗಳು ನಮ್ಮಲ್ಲಿ ದೈಹಿಕ ಸಾಮರ್ಥ್ಯ ತುಂಬಲು ಕಾರಣವಾಗುತ್ತವೆ ಎಂದು ಗದಗ ಸರಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನ ಪ್ರಾಧ್ಯಾಪಕ ಡಾ.ಸಿದ್ದಲಿಂಗೇಶ ಸಜ್ಜನಶೆಟ್ಟರ ನುಡಿದರು.

ಇಲ್ಲಿನ ಶ್ರೀ ಕಲ್ಮೇಶ್ವರ ವಿದ್ಯಾ ಪ್ರಸಾರಕ ಸಮಿತಿಯ ಕಲಾ, ವಿಜ್ಞಾನ, ವಾಣಿಜ್ಯ ಮಹಾವಿದ್ಯಾಲಯ ಹಾಗೂ ಕನ್ನಡ ಸ್ನಾತಕೋತ್ತರ ಅಧ್ಯಯನ ಕೇಂದ್ರದಲ್ಲಿ ಪಠ್ಯೇತರ ಚಟುವಟಿಕೆಗಳ ಉದ್ಘಾಟನಾ ಸಮಾರಂಭ ಮತ್ತು ಬಿ.ಎ, ಬಿ.ಕಾಮ್, ಬಿ.ಎಸ್‌ಸಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ದೈಹಿಕವಾಗಿ ನಾವು ಸದೃಢವಾಗಿದ್ದಲ್ಲಿ ನಮಗೆ ಓದಲು ಉತ್ಸಾಹ ಬರುತ್ತದೆ. ಇವುಗಳ ಜೊತೆಗೆ ಭಾಷಣ, ಸಂಗೀತ, ನಾಟಕ, ಏಕಪಾತ್ರಾಭಿನಯಗಳು, ನೃತ್ಯಗಳು ಕೆಲವರಲ್ಲಿ ಸುಪ್ತವಾಗಿ ಅಡಗಿರುತ್ತವೆ. ಇವುಗಳನ್ನೆಲ್ಲ ವ್ಯಕ್ತಪಡಿಸಲು ಪಠ್ಯೇತರ ಚಟುವಟಿಕೆಗಳ ವೇದಿಕೆಗಳು ಕಾರಣವಾಗುತ್ತವೆ. ಈ ವೇದಿಕೆಗಳನ್ನು ನೀವು ಸಮರ್ಥವಾಗಿ ಬಳಸಿಕೊಳ್ಳಬೇಕು. ಜೊತೆಗೆ



ಪ್ರಥಮ ವರ್ಷಕ್ಕೆ ಆಗಮಿಸುತ್ತಿರುವ ವಿದ್ಯಾರ್ಥಿಗಳು ಮಹಾವಿದ್ಯಾಲಯದ ಎಲ್ಲ ಕಾರ್ಯಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಗುರುಗಳ ಮಾರ್ಗದರ್ಶನದಲ್ಲಿ ಸಂಸ್ಥೆಯ ಹೆಸರನ್ನು ಬೆಳಗಿಸುವಂತಾಗಬೇಕು. ತಂದೆ-ತಾಯಿ, ಗುರುಗಳನ್ನು ಸದಾ ಗೌರವಿಸಬೇಕು. ಭವಿಷ್ಯದಲ್ಲಿ ನಿಮ್ಮ ಬೆಳಕಿನ ದಾರಿದೀಪವೇ ಅವರು ಎಂದು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ಎನ್‌ಎಸ್‌ಎಸ್‌ನಲ್ಲಿ ಮಹಾವಿದ್ಯಾಲಯದ ಉತ್ತಮ ಸ್ವಯಂಸೇವಕರೆಂದು ಗುರುತಿಸಲ್ಪಟ್ಟ ರವಿಚಂದ್ರ ಕುರಿ, ಲಾವಣ್ಯ ಗಂಗೋಜಿ, ಮಹಾದೇವಿ ಗೋಲಗೌಡ್ರ, ಅಕ್ಷತಾ ಮಣ್ಣೂರ ಅವರನ್ನು ಮಹಾವಿದ್ಯಾಲಯದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಅಕ್ಷತಾ ಮಣ್ಣೂರ ಪ್ರಾರ್ಥಿಸಿದರು. ಪ್ರಾಚಾರ್ಯ ಡಾ. ಎಂ.ಎನ್. ಕಡಪಟ್ಟಿ ಪ್ರಾಸ್ತವಿಕವಾಗಿ ಮಾತನಾಡಿದರು. ಮಂಜುನಾಥ ಹಿರೇಹಾಳ ಸ್ವಾಗತಿಸಿದರೆ, ಎಸ್.ಬಿ.ಹಳ್ಳೂರ, ರೇಷ್ಮಾ ಟಕ್ಕೇದ ನಿರೂಪಿಸಿದರು. ಪ್ರಧಾನ ಕಾರ್ಯದರ್ಶಿ ರವಿಚಂದ್ರ ಕುರಿ ವಂದಿಸಿದರು.

> ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಬಿ.ಸಿ. ಪಾಟೀಲ ವಹಿಸಿದ್ದರು. ವೇದಿಕೆಯ ಮೇಲೆ ಸಂಸ್ಥೆಯ ಆಡಳಿತ ಮಂಡಳಿಯ ಗೌರವ ಕಾರ್ಯದರ್ಶಿ ಎಂ.ಎನ್. ತೇಜಿಗೌಡ್ರ, ಪ್ರಾಚಾರ್ಯ ಡಾ. ಎಂ.ಎನ್. ಕಡಪಟ್ಟಿ , ಡಾ. ಪಿ.ಎಸ್. ಕಣವಿ, ಪ್ರಧಾನ ಕಾರ್ಯದರ್ಶಿ ರವಿಚಂದ್ರ ಕುರಿ, ಮಹಿಳಾ ಪ್ರತಿನಿಧಿ ಅನಿತಾ ವಿ.ಅಂಗಡಕಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಡಾ.ಪ್ರಭು ಗಂಜಿಹಾಳ, ಡಾ. ಎಸ್.ಬಿ. ಸಜ್ಜನರ, ಪ್ರೊ. ಎನ್.ಆರ್. ಹಿರೇಸಕ್ಕರಗೌಡರ, ಪ್ರೊ.ವಿಶ್ವನಾಥ ಪಾಟೀಲ, ಪ್ರೊ. ಮಲ್ಲಿಕಾರ್ಜುನ ಬೇವೂರ, ಪ್ರೊ. ಎಸ್.ಎನ್. ಮಾಳವಾಡ, ಪ್ರೊ. ಎ.ಎಮ್. ಕೆಂಚನಗೌಡರ, ಪ್ರೊ. ಜಿ.ಎಂ. ಪೊಲೀಸ್‌ಪಾಟೀಲ, ಪ್ರೊ. ಜಯಶ್ರೀ ಪಾಟೀಲ, ಪ್ರೊ. ಕೆ.ಎ. ಕೊಪ್ಪದ, ಪ್ರೊ. ಬಿ.ಬಿ. ಜಾಲಿಹಾಳ, ಪ್ರೊ. ಶಿಲ್ಪಾ ಮೆದನಾಪೂರ, ಎಸ್.ಜಿ. ಮಾಳವಾಡ, ಎಸ್.ಆರ್. ಮುಂದಿನಮನಿ, ಎನ್‌ಎಸ್‌ಎಸ್ ಯೋಜನಾಧಿಕಾರಿಗಳಾದ ಡಾ.ಕುಮಾರ ಹಂಜಗಿ, ಪ್ರೊ. ಎಸ್.ವಾಯ್. ಪೂಜಾರ, ಮಹಾವಿದ್ಯಾಲಯದ ಸಿಬ್ಬಂದಿಗಳು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಶ್ರೀ ಜಗದ್ಗುರು ರೇಣುಕ ಮಂದಿರದ ಕಾರ್ತಿಕ ದೀಪೋತ್ಸವ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

## ಅಜ್ಞಾನದ ಕತ್ತಲೆ ಕಳೆಯಲು ಗುರು ಬೇಕು

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹೊರಗಿನ ಕತ್ತಲೆ ಕಳೆಯಲು ದೀಪ ಬೇಕು. ಒಳಗಿರುವ ಅಜ್ಞಾನ ಅನ್ನುವ ಕತ್ತಲೆ ಕಳೆಯಲು ಗುರು ಬೇಕು. ಅರಿವು ಆದರ್ಶಗಳ ಪರಿಪಾಲನೆಯಿಂದ ಜೀವನ ಉಜ್ವಲಗೊಳ್ಳುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ವಿದ್ಯಾನಗರದ ಶ್ರೀ ರಂಭಾಪುರಿ ಜಗದ್ಗುರು ವೀರಗಂಗಾಧರ ಸಮುದಾಯ ಭವನದಲ್ಲಿರುವ ಶ್ರೀ ಜಗದ್ಗುರು ರೇಣುಕ ಮಂದಿರದಲ್ಲಿ ಜರುಗಿದ ಕಾರ್ತಿಕ ದೀಪೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯನಿಗೆ ಅರಿವು, ಆರೋಗ್ಯ ಮತ್ತು ಆಯುಷ್ಯ ಬಹು ಮುಖ್ಯ. ಭೌತಿಕ ಬದುಕು ಶಿವಜ್ಞಾನದ ಅರಿವು ಸಂಪಾದಿಸಿಕೊಂಡು ಬಾಳಬೇಕಾಗುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಮೌಲ್ಯಾಧಾರಿತ



ಬದುಕಿಗೆ ಧರ್ಮದ ದಶವಿಧ ಸೂತ್ರಗಳನ್ನು ಬೋಧಿಸಿದ್ದಾರೆ. ಅಹಿಂಸಾ, ಸತ್ಯ, ಅಸ್ತೇಯ, ಬ್ರಹ್ಮಚರ್ಯ, ದಯಾ, ಕ್ಷಮಾ, ದಾನ, ಪೂಜಾ, ಜಪ, ಧ್ಯಾನ ಎಂಬ ಹತ್ತು ಸೂತ್ರಗಳು ಸಕಲರ ಬಾಳಿನ ಶ್ರೇಯಸ್ಸಿಗೆ ಕಾರಣವಾಗಿವೆ. ಮಾತು ಮತ್ತು ಕೃತಿ ಒಂದಾಗಿ ಬಾಳಿದಾಗ ಯಶಸ್ಸು ಕಟ್ಟಿಟ್ಟ ಬುತ್ತಿ ಎಂದ ಶ್ರೀಗಳು, ಶ್ರೀ ಜಗದ್ಗುರು ರಂಭಾಪುರೀಶ ಸಾಂಸ್ಕೃತಿಕ ಸಂಘದ ಅಧ್ಯಕ್ಷರಾದ ವಿಶ್ವನಾಥ ಹಿರೇಗೌಡರ ಮತ್ತು ಅವರ ಸಂಗಡಿಗರು ಮಾಡುತ್ತಿರುವ ಕಾರ್ಯ ಸ್ತುತ್ಯವಾದುದೆಂದರು.

ಪವಿತ್ರ ಸಮಾರಂಭದಲ್ಲಿ ಸುಳ್ಳದ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು, ಅಮ್ಮಿನಭಾವಿ ಅಭಿನವ ಶಾಂತಲಿಂಗ ಶಿವಾಚಾರ್ಯರು, ಮತ್ತು ಚಿಮ್ಮಲಗಿ ಮಠಾಧ್ಯಕ್ಷರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಮಹಾಪೌರರಾದ ವೀಣಾ ಬರದ್ವಾಡ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಸದಾನಂದ ಡಂಗನವರ, ಡಾ. ಎಸ್.ಪಿ. ಬಳಿಗಾರ, ಬಸವರಾಜ ಕಲ್ಯಾಣಿಮಠ, ಪ್ರಕಾಶ ಬೆಂಡಿಗೇರಿ, ಇಂದುಮತಿ ಮಾನ್ವಿ ಮುಂತಾದವರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಆಶೀರ್ವಾದ ಪಡೆದರು.

ಶ್ರೀ ಜಗದ್ಗುರು ರಂಭಾಪುರೀಶ ಸಾಂಸ್ಕೃತಿಕ ಸಂಘದ ಅಧ್ಯಕ್ಷ ವಿಶ್ವನಾಥ ಹಿರೇಗೌಡರ ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಗದಿಗೆಯ್ಯ ವಿ. ಹಿರೇಮಠ ನಿರೂಪಿಸಿದರು.

> ಝೀ ಕನ್ನಡ ಕಲಾವಿದ ಹನುಮಂತ ಲಮಾಣಿ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಲ್ಪಟ್ಟ ವಿಜ್ಞಾನಿ ಎನ್.ಆರ್. ಬಾಣಾಪುರಮಠ, ಅಂತಾರಾಷ್ಟ್ರೀಯ ಕುಬ್ಜರ ಕ್ರೀಡಾಕೂಟದಲ್ಲಿ ಚಿನ್ನದ ಪದಕ ವಿಜೇತ ದೇವಪ್ಪ ಮೋರೆ ಇವರನ್ನು ಸನ್ಮಾನಿಸಲಾಯಿತು. ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಗಳಲ್ಲಿ ಅತ್ಯುತ್ತಮ ಅಂಕ ಗಳಿಸಿದ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

### ಹಿರೇಮಠದ ಜಾತ್ರಾ ಮಹೋತ್ಸವವನ್ನು ಉದ್ಘಾಟಿಸಿದ ಮಿಥುನ್ ಪಾಟೀಲ ಅಭಿಮತ

## ಪ್ರವಚನ ಶ್ರವಣದಿಂದ ಮನದ ಶುದ್ಧಿ ಸಾಧ್ಯ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಧಾರ್ಮಿಕ ಆಚರಣೆಗಳು ಮನಸ್ಸಿಗೆ ನೆಮ್ಮದಿಯನ್ನು ಕೊಡುತ್ತವೆ. ಈ ಧಾರ್ಮಿಕ ಆಚರಣೆಗಳನ್ನು ಆಚರಿಸುವುದು ಹೇಗೆ ಎಂಬುದನ್ನು ತಿಳಿಸಲು ಒಬ್ಬ ಸಮರ್ಥ ಗುರುಗಳು ಬೇಕು. ಅಂತಹ ಗುರುಗಳ ಸ್ಥಾನದಲ್ಲಿ ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಪೂಜ್ಯರು ಇದ್ದಾರೆ ಎಂದು ರೋಣ ಪುರಸಭೆಯ ಉಪಾಧ್ಯಕ್ಷ ಮಿಥುನ್ ಜಿ.ಪಾಟೀಲ ಹೇಳಿದರು.

ಪಟ್ಟಣದ ಹಿರೇಮಠದಲ್ಲಿ ಸೋಮವಾರದಿಂದ 11 ದಿನಗಳ ಕಾಲ ನಡೆಯುವ ಜಾತ್ರಾ ಮಹೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮನುಷ್ಯನ ಮನಸ್ಸು ಎಂದಿಗೂ ಸ್ಥಿರವಾಗಿರುವುದಿಲ್ಲ. ಅದು ಸ್ಥಿರವಾಗಿ ನಿಲ್ಲಬೇಕೆಂದರೆ ಇಂತಹ ಜಾತ್ರೆಗಳಲ್ಲಿ ಪುರಾಣ, ಪ್ರವಚನಗಳ ಆಲಿಸುವಿಕೆ ಮುಖ್ಯವಾಗುತ್ತದೆ. ಪ್ರವಚನಗಳಿಂದ ಮನಸ್ಸು ಶುದ್ಧಿಯಾಗುತ್ತದೆ. ಈ ಹನ್ನೊಂದು ದಿನಗಳಲ್ಲಿ ನಿತ್ಯವೂ ಆಧ್ಯಾತ್ಮಿಕದ ಆನಂದವನ್ನು ಸವಿಯುವ ನೀವೇ ಧನ್ಯರು ಎಂದು ಪಾಟೀಲ ಹೇಳಿದರು.

ಸಭೆ ಉದ್ದೇಶಿಸಿ ಅಂದಪ್ಪ ವೀರಾಪೂರ, ಶಹರ ಕಾಂಗ್ರೆಸ್ ಅಧ್ಯಕ್ಷ ಶಿವನಗೌಡ ಪಾಟೀಲ, ಮುಖಂಡ ವೀರಯ್ಯ ಸೋಮನಕಟ್ಟಿಮಠ, ಡಾ. ಕೆ.ಬಿ. ಧನ್ನೂರ ಮಾತನಾಡಿದರು. ವೇದಿಕೆಯ ಮೇಲೆ ಎಪಿಎಂಸಿ ಮಾಜಿ ಉಪಾಧ್ಯಕ್ಷ ನಿಂಗನಗೌಡ ಲಕ್ಕನಗೌಡ್ರ ಉಪಸ್ಥಿತರಿದ್ದರು.

ಮಲ್ಲಿಕಾರ್ಜುನ ಶಿವಾಚಾರ್ಯರು ಆಶೀರ್ವಚನ ನೀಡಿ, ಭಕ್ತರ ಸಹಕಾರವಿದ್ದರೆ ಮಠಗಳು ಬೆಳೆಯುತ್ತವೆ. ಮಠಗಳು ಬೆಳೆದರೆ ಸ್ವಾಮೀಜಿಗಳು ಏನಾದರೂ ಸಮಾಜದ ಅಭಿವೃದ್ಧಿಗಳನ್ನು ಮಾಡಲು ಸಾಧ್ಯ. ನರೇಗಲ್ಲದ ಭಕ್ತರು ಮಠದ ಮೇಲೆ ಅನನ್ಯ ಭಕ್ತಿಯನ್ನಿರಿಕೊಂಡು ಕಾರ್ಯ ಮಾಡುತ್ತಿರುವುದರಿಂದಲೇ ಈ ಜಾತ್ರಾ ಮಹೋತ್ಸವ ನಡೆಯುತ್ತಿದೆ. ಪಂ. ಪುಟ್ಟರಾಜ ಕವಿ ಗವಾಯಿಗಳವರು ಈ ನಾಡು ಕಂಡ ಅಗಾಧ ಪಂಡಿತರು ಮತ್ತು ಸಂಗೀತಗಾರರು. ಅವರು ರಚಿಸಿರುವ ಸಾಧ್ವಿ ಶಿರೋಮಣಿ ಹೇಮರೆಡ್ಡಿ ಮಲ್ಲಮ್ಮನವರ ಪುರಾಣವು ನಿಮಗೆ ಬಹಳಷ್ಟು ಮುದ ನೀಡುವುದರ ಜೊತೆಗೆ ಭಕ್ತಿಯ ಸಾಧನವನ್ನು ತಿಳಿಸುತ್ತದೆ. ನಾಳೆಯಿಂದ ನಡೆಯಲಿರುವ ಹೇಮರೆಡ್ಡಿ ಮಲ್ಲಮ್ಮನವರ ಪುರಾಣದ ಅನೇಕ ಪ್ರಸಂಗಳನ್ನು ಕೇಳಿ ಜೀವನ ಪಾವನ ಮಾಡಿಕೊಳ್ಳಿರಿ ಎಂದರು.

ಶ್ರೀ ಅನ್ನಪೂರ್ಣೇಶ್ವರಿ ಮಹಿಳಾ ಮಂಡಳದ ಸದಸ್ಯರು ಪ್ರಾರ್ಥಿಸಿದರು. ಶಿಕ್ಷಕ ಸುರೇಶ ಹಳ್ಳಿಕೇರಿ ನಿರೂಪಿಸಿದರು. ಶಿಕ್ಷಕ ಎಂ.ಕೆ. ಬೇವಿನಕಟ್ಟಿ ಸ್ವಾಗತಿಸಿದರು. ಕಾರ್ಯದರ್ಶಿ ಈಶ್ವರ ಬೆಟಗೇರಿ ವಂದಿಸಿದರು.

> ಮುಖಂಡ ಸಿದ್ದಣ್ಣ ಬಂಡಿ ಮಾತನಾಡಿ, ನಮ್ಮ ವೀರಶೈವ ಧರ್ಮದ ಲಾಂಛನಗಳನ್ನು ತಿಳಿಸುವಲ್ಲಿ ಮಠ-ಮಾನ್ಯಗಳ ಪಾತ್ರ ಬಹಳಷ್ಟು ದೊಡ್ಡದಿದೆ. ಲಾಂಛನಗಳ ಆಚರಣೆಯನ್ನು ತಿಳಿಸುವ ಕಾರ್ಯವು ಮಠಾಧೀಶರಿಂದ ನಡೆದರೆ ಜೀವನಕ್ಕೊಂದು ಅರ್ಥ ಬರುತ್ತದೆ. ಇಂದಿನ ಮೊಬೈಲ್ ಯುಗದಲ್ಲಿ ಇಂತಹ ಕಾರ್ಯಗಳಿಗೆ ಜನರು ಮನಸ್ಸು ಮಾಡುವುದು ಕಡಿಮೆ ಎನ್ನಿಸುತ್ತಿದ್ದರೂ, ನರೇಗಲ್ಲ ಹಿರೇಮಠದ ಪೂಜ್ಯರ ಒತ್ತಾಸೆಯಿಂದ ಇಲ್ಲಿ ಪ್ರತಿ ವರ್ಷವೂ ಧಾರ್ಮಿಕ ಕಾರ್ಯಗಳು ನಡೆಯುತ್ತಿರುವುದು ಸ್ತುತ್ಯವಾಗಿದೆ ಎಂದರು.

## ಪತಂಜಲಿ ಯೋಗ ಸಮಿತಿಯಿಂದ ಗ್ಲೋಬಲ್ ಯೋಗ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುನ್ಸಿಪಲ್ ಕಾಲೇಜು ಮೈದಾನದ ಪತಂಜಲಿ ಯೋಗ ಕಕ್ಷೆಯಲ್ಲಿ ಗ್ಲೋಬಲ್ ಯೋಗ ಸಮಿತಿ ಹಾಗೂ ಪತಂಜಲಿ ಯೋಗ ಸಮಿತಿ ಗದಗ ಇವುಗಳ ಸಂಯೋಜನೆಯೊಂದಿಗೆ ಗದಗ ಪತಂಜಲಿ ಯೋಗ ಸಮಿತಿಯ ಶ್ರೀ ಅಂಜನೇಶ ಮಾನೆ ಇವರ ನೇತೃತ್ವದಲ್ಲಿ ಶನಿವಾರ ಸಭೆ ನಡೆಸಲಾಯಿತು.

ಡಿ. 23, 24ರಂದು ಬೆಂಗಳೂರಿನ ಪ್ಯಾಲೇಸ್ ಗ್ರೌಂಡ್‌ನಲ್ಲಿ ನಡೆಯಲಿರುವ



ಗ್ಲೋಬಲ್ ಯೋಗ ಸಮಿತಿ-2023 ಇದರ ಮಾಹಿತಿಯನ್ನು ಆಯುರ್ವೇದಿಕ್ ಕಾಲೇಜಿನ ಶಿವಾನಂದ ಯೋಗ ಕೇಂದ್ರ ಗದಗ ಇದರ ಪ್ರಾಚಾರ್ಯ, ಯೋಗಾಚಾರ್ಯ ಎಸ್.ಎಸ್. ಹಿರೇಮಠ ಗುರುಗಳು ಅವರ ತಂಡದೊಂದಿಗೆ ಯೋಗ ಕಕ್ಷೆಗೆ ಆಗಮಿಸಿ, ಅದರ ಮಾಹಿತಿಯನ್ನು ಸವಿಸ್ತಾರವಾಗಿ ತಿಳಿಸಿಕೊಟ್ಟರು.

ಆಸಕ್ತರು ಹೆಸರನ್ನು ನೋಂದಾಯಿಸಿ ಎರಡು ದಿನಗಳ ತರಗತಿಯ ಲಾಭವನ್ನು ಪಡೆದುಕೊಳ್ಳಲು ತಿಳಿಸಿದರು. ಕಾರ್ಯಕ್ರಮದಲ್ಲಿ ಪತಂಜಲಿ ಯೋಗ ಸಮಿತಿಯ ಎಲ್ಲ ಯೋಗ ಕಕ್ಷೆಗಳಿಂದ ಸಾಧಕ, ಸಾಧಕಿಯರು, ಯೋಗ ಶಿಕ್ಷಕರು, ಯೋಗಾಸಕ್ತರು ಪಾಲ್ಗೊಂಡಿದ್ದರು.

## ವಿದ್ಯಾರ್ಥಿಗಳಿಗೆ ಪುಸ್ತಕ ಕೊಡುಗೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಹಾಗೂ ಮಾತೋಶ್ರೀ ಸಾವಿತ್ರಮ್ಮ ಚಾರಿಟೆಬಲ್ ಟ್ರಸ್ಟ್ ಮುಂಡರಗಿ ಇವರ ಆಶ್ರಯದಲ್ಲಿ, ಗದಗ ಜಿಲ್ಲೆಯ ಗದಗ (ಶಹರ), ಗದಗ (ಗ್ರಾ), ರೋಣ, ನರಗುಂದ ಹಾಗೂ ಶಿರಹಟ್ಟಿ ತಾಲೂಕುಗಳಲ್ಲಿಯ ಎಲ್ಲ ಸರಕಾರಿ ಪ್ರೌಢಶಾಲೆಗಳಿಗೆ ಮಾತೋಶ್ರೀ ಸಾವಿತ್ರಮ್ಮ ಚಾರಿಟೆಬಲ್ ಟ್ರಸ್ಟ್ ವತಿಯಿಂದ ಕೊಡಮಾಡಿದ ಪುಸ್ತಕಗಳನ್ನು ಸಾ.ಶಿ. ಇಲಾಖೆಯ ಉಪ ನಿರ್ದೇಶಕ ಎಂ.ಎನ್. ರಡ್ಡೇರ ವಿತರಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಹಾಗೂ




ವಿ.ವಿ. ನಡುವಿನಮನಿ ಅವರು ಮಾತನಾಡಿ, ಮಾತೋಶ್ರೀ ಸಾವಿತ್ರಮ್ಮ ಚಾರಿಟೆಬಲ್ ಟ್ರಸ್ಟ್, ಮುಂಡರಗಿ ಅವರು ಮಾಡುತ್ತಿರುವ ಕಾರ್ಯವನ್ನು ಶ್ಲಾಘಿಸಿದರು. ಟ್ರಸ್ಟ್‌ನ ಅಧ್ಯಕ್ಷ ಪ್ರೊ. ಸಿ.ಡಿ. ಪಾಟೀಲ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮುಖ್ಯೋಪಾಧ್ಯಾಯೆ ಪಾರ್ವತಿ ವಸ್ತ್ರದ ಅಧ್ಯಕ್ಷತೆ ವಹಿಸಿದ್ದರು. ಟ್ರಸ್ಟ್ ಕಾರ್ಯದರ್ಶಿ ಅಂದಾನಗೌಡ ಕುಲಕರ್ಣಿ, ಸದಸ್ಯರಾದ ಎಸ್.ಎಸ್. ಖಿಶಿ ಮುಂತಾದವರಿದ್ದರು. ಸಂಜೀವಿನಿ ಕೂಲಗುಡಿ ಕಾರ್ಯಕ್ರಮ ನಿರ್ವಹಿಸಿದರು. ಡಯಟ್ ಉಪನ್ಯಾಸಕ ಗೋಪಾಲ ದಾಸರ ವಂದಿಸಿದರು.

## ಸಹಕಾರ ಸಂಘಕ್ಕೆ ನೂತನ ಅಧ್ಯಕ್ಷರ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ





ಇಲ್ಲಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ನಂ-3ರ ಅಧ್ಯಕ್ಷ-ಉಪಾಧ್ಯಕ್ಷರ ರಾಜಿನಾಮೆಯಿಂದ ತೆರವಾಗಿದ್ದ ಎರಡು ಸ್ಥಾನಗಳಿಗೆ ನೂತನ ಅಧ್ಯಕ್ಷ-ಉಪಾಧ್ಯಕ್ಷರನ್ನು ಆಯ್ಕೆ ಮಾಡಲಾಯಿತು.

ಅಧ್ಯಕ್ಷರನ್ನಾಗಿ ಕಳಕಪ್ಪ ಟೆಂಗಿನಕಾಯಿ ಹಾಗೂ ಉಪಾಧ್ಯಕ್ಷರನ್ನಾಗಿ ಅಂಕಲೆಪ್ಪ ಬಾಳಿಕಟ್ಟಿ ಅವರನ್ನು ಮುಂದಿನ 30 ತಿಂಗಳ ಅವಧಿಗೆ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾ ಅಧಿಕಾರಿಗಳು ಘೋಷಿಸಿದರು.

ಈ ಸಂದರ್ಭದಲ್ಲಿ ಸಂಘದ ನಿರ್ದೇಶಕರಾದ ಬಸವರಾಜ ಹುಬ್ಬಳ್ಳಿ, ರಾಚಪ್ಪ ನಾಲ್ವಾಡದ, ಫಾಲಾಕ್ಷಪ್ಪ ಅರಹುಣಶಿ, ಮಲ್ಲಪ್ಪ ಸೊರಟೂರು, ಬಸವರಾಜ ಬಾರಿಕಾಯಿ, ಯಲ್ಲಪ್ಪ ಪೂಜಾರ, ಮಲ್ಲವ್ವ ಸೊಪ್ಪಿನ, ಬಸವ್ವ ಬೆಟಗೇರಿ, ವೀರಯ್ಯ ನಡುವಿನಮಠ, ಚಂದ್ರಗೌಡ ಪಾಟೀಲ ಉಪಸ್ಥಿತರಿದ್ದರು. ಕಾರ್ಯದರ್ಶಿ ಎಸ್.ಬಿ. ಮದ್ದೂರ ಸ್ವಾಗತಿಸಿದರು. ಪ್ರವೀಣ ಕಲಾಲ ವಂದಿಸಿದರು.

ಕರ್ನಾಟಕ ಸರಕಾರ

**ಸಹಾಯಕ ನಿರ್ದೇಶಕರ ಕಛೇರಿ ಸಮಾಜ ಕಲ್ಯಾಣ ಇಲಾಖೆ ಗದಗ**

ದೂರವಾಣಿ ಸಂಖ್ಯೆ:(08372-297258) E-mail- tswogdg@gmail.com)

ಸಂ:ಸನಿಸಕಇ/ಗದಗ /ಎಸ್-2/ಬಾವಾ/2023-24 ದಿನಾಂಕ: 29-11-2023

**ಟೆಂಡರ್ ಪ್ರಕಟಣೆ**

2023-24 ನೇ ಸಾಲಿಗಾಗಿ ಸರಕಾರಿ ಅಧಿಕೃತ ಕೆಲಸ ಕಾರ್ಯಗಳ ಅನುಷ್ಠಾನಕ್ಕಾಗಿ ಗದಗ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿಗೆ ಸುಸ್ಥಿತಿಯಲ್ಲಿರುವ ಹಾಗೂ ಚಾಲ್ತಿ ಕಾಗದ ಪತ್ರ ಹೊಂದಿರುವ (2022 ರ ಹಾಗೂ ಇತ್ತೀಚಿನ ವಿನ್ಯಾಸದ) (ಹವಾ ನಿಯಂತ್ರಣ ರಹಿತ ವಾಹನ-Non AC) ಟಾಟಾ ವಿಸ್ತಾ, ಬೊಲೇರೊ ಹಾಗೂ ಇತರೆ ಕಂಪನಿಯ ವಾಹನಗಳನ್ನು ತಿಂಗಳ ಬಾಡಿಗೆ ಆಧಾರದ ಮೇಲೆ ಒಂದು ವರ್ಷದ ಅವಧಿಗೆ ಒಂದು (ಏಕ) ಲಕೋಟೆ ವಿಧಾನದಲ್ಲಿ ಟೆಂಡರ ಆಹ್ವಾನಿಸಲಾಗಿದೆ ಆಸಕ್ತ ಟೆಂಡರದಾರರು ಟೆಂಡರ್ ಸಲ್ಲಿಸಬಹುದಾಗಿದೆ ಹಾಗೂ ಬಿ. ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ, ಪ್ರವಾಸೋದ್ಯಮ ನಿಗಮಗಳಿಂದ ಸಹಾಯಧನದ ಮೂಲಕ ಪಡೆದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಾಹನಗಳ ಮಾಲಕರುಗಳಿಗೆ ಮೊದಲು ಆದ್ಯತೆ ಹಾಗೂ ಇತರೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಾಹನ ಮಾಲೀಕರಿಗೆ 2ನೇ ಅದ್ಯತೆ ಮೂಲಕ ಆಯ್ಕೆ ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಖಾಲಿ ಟೆಂಡರ್ ಫಾರಂಗಳನ್ನು ಪಡೆಯುವ ಕೊನೆಯ ದಿನಾಂಕ : **13/12/2023** ಸಂಜೆ 4:00 ಗಂಟೆಗೆ. ಸೀಲು ಮಾಡಿದ ಟೆಂಡರ್ ಫಾರಂಗಳನ್ನು ಪೆಟ್ಟಿಗೆಗೆ ಹಾಕುವ ಕೊನೆಯ ದಿನಾಂಕ : **13/12/2023** ಸಂಜೆ 4:00 ಗಂಟೆಗೆ. ಹಾಗೂ ಟೆಂಡರ್ ಪೆಟ್ಟಿಗೆಯನ್ನು ತೆರೆಯುವ ದಿನಾಂಕ : **14/12/2023** ಬೆಳಿಗ್ಗೆ 11:00 ಗಂಟೆಗೆ ಪ್ರತಿ ವಾಹನಕ್ಕೆ ಇ.ಎಂ.ಡಿ ಮೊತ್ತ ರೂ. **10,000=00** ಇದ್ದು ಟೆಂಡರ ಫಾರ್ಮ ಬೆಲೆ ರೂ. **1500=00** ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : **08372-297258** ಗೆ ಸಂಪರ್ಕಿಸಲು ಕೋರಲಾಗಿದೆ.

**ಸಹಿ/- ಸಹಾಯಕ ನಿರ್ದೇಶಕರು,**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/336/2023-24 **ಸಮಾಜ ಕಲ್ಯಾಣ ಇಲಾಖೆ, ಗದಗ**

**ಶೀಘ್ರ ನಿಮ್ಮ ಬೇಡಿಕೆ ಈಡೇರಲಿ: ಗೊಂಡಬಾಳ**

## ಅತಿಥಿ ಉಪನ್ಯಾಸಕರಿಗೆ ಭರವಸೆಯ ಹಸ್ತ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಸುಮಾರು ಎಂಟು ದಿನಗಳಿಂದ ನಡೆಸುತ್ತಿರುವ ನಿಮ್ಮ ಧರಣಿ ಕೊನೆಗಾಣುವ ಸಮಯ ಬೇಗ ಬರಲಿ. ನಿಮ್ಮ ಬೇಡಿಕೆ ಶೀಘ್ರ ಈಡೇರಲಿ ಎಂದು ಕೊಪ್ಪಳ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಕಾಲೇಜು ಅಭಿವೃದ್ಧಿ ಮಂಡಳಿ ಸದಸ್ಯ ಮಂಜುನಾಥ ಗೊಂಡಬಾಳ ಹಾರೈಸಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಮುಂದುವರಿದ ಅತಿಥಿ ಉಪನ್ಯಾಸಕರ ಅನಿರ್ದಿಷ್ಟಾವಧಿ ಧರಣಿ ಉದ್ದೇಶಿಸಿ ಮಾತನಾಡಿದ ಅವರು, ಶುಕ್ರವಾರ ನಡೆದ ಪ್ರತಿಭಟನಾ ಮೆರವಣಿಗೆ ವೇಳೆ ಮಾಡಿದ ಅಳಿಲು ಸೇವೆ ಕೊಂಡಾಡುತ್ತಿರುವುದು ಕೊಂಚ ಮುಜುಗರ ತರುತ್ತಿದೆ. ನಿಮ್ಮ ಜೊತೆ ಸದಾ ನಾವಿರುತ್ತೇವೆ. ಬೆಳಗಾವಿ ಅಧಿವೇಶನದಲ್ಲಿ ನಿಮಗೆ ಸಿಹಿ ಸುದ್ದಿ ಸಿಗಲಿ ಎಂದು ಶುಭ ಕೋರಿದರು.

ಶಿವಬಸಪ್ಪ ಮಸ್ಕಿ ನಿರೂಪಿಸಿದರು. ಡಾ.ತುಕಾರಾಂ ನಾಯಕ ವಂದಿಸಿದರು. ಈ ವೇಳೆ ಅತಿಥಿ ಉಪನ್ಯಾಸಕರಾದ ಶಿವಮೂರ್ತೆಪ್ಪ, ಗೀತಾ, ಗಿರಿಜಾ, ಬಸವರಾಜ ಕರುಗಲ್, ವಿಜಯಕುಮಾರ್, ಪ್ರಕಾಶ್ ಜಡಿಯವರ್, ನವೀನ್, ಮಹಾಂತೇಶ ನೆಲಾಗಣಿ, ಶೀಬಾ ಬಸವರಾಜ, ಜ್ಞಾನೇಶ್ವರ ಪತ್ತಾರ, ಗೋಣಿಬಸಪ್ಪ, ಡಾ.ವೀರಣ್ಣ ಸಜ್ಜನರ್, ಡಾ.ಸಣ್ಣದೇವೇಂದ್ರಸ್ವಾಮಿ, ರವಿ ಹಿರೇಮಠ, ಪ್ರದೀಪ್, ಮಹೇಶ್, ಈಶಪ್ಪ ಮೇಟಿ, ಬಿಷ್ಟಪ್ಪ, ಪ್ರಕಾಶ್ ಬಳ್ಳಾರಿ, ಎಂ.ಶಿವಣ್ಣ, ಸಾವಿತ್ರಿ, ಅಕ್ಕಮಹಾದೇವಿ ಇತರರು ಇದ್ದರು.

**ಎನ್‌ಎಸ್‌ಎಸ್ 'ಕಾನೂನು ಅರಿವು–ನೆರವಿಗಾಗಿ ಯುವಜನತೆ' ಕಾರ್ಯಕ್ರಮದ ಸಮಾರೋಪ**

# ಜ್ಞಾನದ ದಾಸೋಹ ಹಂಚಿಕೆಯಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಗತ್ತಿನಲ್ಲಿ ಜ್ಞಾನಕ್ಕಿಂತ ಮಿಗಿಲಾದ ವಸ್ತು ಮತ್ತೊಂದಿಲ್ಲ. ಅದನ್ನು ದಾಸೋಹದ ರೂಪದಲ್ಲಿ ಹಂಚಿಕೊಳ್ಳುವುದಕ್ಕಿಂತ ಮಹತ್ತರ ಕಾರ್ಯ ಮತ್ತೊಂದಿಲ್ಲ ಎಂದು ಜೆಟಿ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥ ವಿಶ್ವನಾಥ ಜಿ.ಹೇಳಿದರು.

ಸಮೀಪದ ಹಾತಲಗೇರಿ ಗ್ರಾಮದಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ಹುಬ್ಬಳ್ಳಿ, ಕೆ.ಎಲ್.ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯ ಹಾಗೂ ಗ್ರಾ.ಪಂ ಇವರ ಸಂಯುಕ್ತಾಶ್ರಯದಲ್ಲಿ ಜರುಗಿದ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದ 'ಕಾನೂನು ಅರಿವು–ನೆರವಿಗಾಗಿ ಯುವಜನತೆ' ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಹಲವಾರು ರೂಪದ ದಾಸೋಹಗಳು ಚಾಲ್ತಿಯಲ್ಲಿವೆ. ಅದರಲ್ಲಿ ಜ್ಞಾನ ದಾಸೋಹವೇ ಅತ್ಯಂತ ಶ್ರೇಷ್ಠವಾದದ್ದು. ಜ್ಞಾನ ಅವ್ಯಕ್ತ ವ್ಯಕ್ತಿಯನ್ನು ಪರಿಪೂರ್ಣ ವ್ಯಕ್ತಿಯನ್ನಾಗಿ ಮಾಡುತ್ತದೆ. ಹೀಗಾಗಿ ಜ್ಞಾನ ದಾಸೋಹ ಎಲ್ಲ ಕಾಲಕ್ಕೂ ಸಲ್ಲುತ್ತದೆ. ಚುನಾವಣೆಯಲ್ಲಿ ಗೆದ್ದು, ಜನರ ಸೇವೆಯನ್ನು ಮಾಡುತ್ತೇವೆ



ಎಂಬುದು ಕೇವಲ ನಾಟಕವಾಗಿರುತ್ತದೆ. ಜನರ ಸೇವೆ ಮಾಡಲು ಅಧಿಕಾರ ಬೇಕಾಗಿಲ್ಲ. ಯಾವ ರೂಪದಲ್ಲಿಯಾದರೂ ಜನರ ಸೇವೆ ಮಾಡಿ ನೆಮ್ಮದಿಯನ್ನು ಪಡೆಯಬಹುದು. ನಾವು ಕಲಿತ ವಿದ್ಯೆಯಿಂದ ಜನರ ಕಷ್ಟಗಳಿಗೆ ಪರಿಹಾರ ಒದಗಿಸುವ ಮನೋಭಾವನೆಯನ್ನು ಬೆಳೆಸಿಕೊಳ್ಳಬೇಕು. ಜ್ಞಾನದ ದಾಸೋಹ ಹಂಚಿಕೆಯಾಗಬೇಕು. ಜ್ಞಾನ ಕೇವಲ ಹಣ ಸಂಪಾದನೆಗೆ ಬಳಕೆಯಾಗದೆ ಜನರ ಕಲ್ಯಾಣಕ್ಕೆ ಮತ್ತು ನಾಗರಿಕರ ಕಷ್ಟಗಳಿಗೆ ಸ್ಪಂದಿಸುವ ಹೃದಯವನ್ನು ಹೊಂದಬೇಕು ಎಂದರು.

ಉಪನ್ಯಾಸಕಿ ಡಾ. ಜ್ಯೋತಿ ಸಿ.ವಿ ಮಾತನಾಡಿ, ವಿದ್ಯಾರ್ಥಿಗಳು ಜೀವನದಲ್ಲಿ ಸಿಕ್ಕ ಅವಕಾಶಗಳನ್ನು ಚಿಕ್ಕದು ದೊಡ್ಡದೆಂದು ನೋಡದೆ ಸರಿಯಾದ ರೀತಿಯಲ್ಲಿ ಉಪಯೋಗಿಸಿಕೊಳ್ಳಬೇಕು. ಎನ್‌ಎಸ್‌ಎಸ್ ಎಂದರೆ ನಿಸ್ವಾರ್ಥ ಸೇವಾ ಯೋಜನೆಯಾಗಿದೆ. ಅದರಿಂದ ಸಿಗುವ ವ್ಯಕ್ತಿತ್ವ ವಿಕಸನ ಕೌಶಲ್ಯಗಳು ನಮ್ಮ ಮುಂದಿನ ಜೀವನಕ್ಕೆ ಭದ್ರ ಬುನಾದಿಯಾಗುತ್ತವೆ ಎಂದರು.

ಉಪನ್ಯಾಸಕ ಡಾ. ವಿಜಯ ಮುರದಂಡೆ ಮಾತನಾಡಿ, ಯಶಸ್ಸು ಪಡೆಯಲು ಶಿಸ್ತು ಮತ್ತು ಸಮಯ ಪಾಲನೆ ಮಾಡಬೇಕು. ಜೀವನದಲ್ಲಿ ಶಿಸ್ತು ಮತ್ತು ಸಮಯಕ್ಕೆ ತನ್ನದೇ ಆದ ಪ್ರಾಮುಖ್ಯತೆ ಇದೆ. ಇದರ ಮಹತ್ವವನ್ನು ಯಾರು ಸರಿಯಾಗಿ ತಿಳಿದಿರುತ್ತಾರೆಯೋ ಅವರು ಜೀವನದಲ್ಲಿ ಸಾಧನೆಯ ಉತ್ತುಂಗಕ್ಕೆ ಹೋಗುತ್ತಾರೆ. ಅಮೂಲ್ಯ ಸಮಯದ ಸದ್ಬಳಕೆ ಹಾಗೂ ಸಮಯವನ್ನು ನ್ಯಾಯೋಚಿತವಾಗಿ ಉಪಯೋಗಿಸಿಕೊಳ್ಳುವ ಚಾಣಾಕ್ಷತೆ ಹೊಂದಿರುತ್ತಾನೆ ಎಂದರು.

ಉಪನ್ಯಾಸಕ ಎಸ್.ಟಿ. ಮೂರಶಿಳ್ಳಿನ ಅಧ್ಯಕ್ಷತೆ ವಹಿಸಿ ಮಾತನಾಡಿ, ಎನ್‌ಎಸ್‌ಎಸ್ ಶಿಬಿರಗಳು ವಿದ್ಯಾರ್ಥಿಗಳಲ್ಲಿ ಶಿಸ್ತು, ಸಮಯ ಪಾಲನೆ ಮತ್ತು ನಾಯಕತ್ವ ಗುಣಗಳನ್ನು ಬೆಳೆಸುವ ಯೋಜನೆಯಾಗಿದೆ. ಈ ಯೋಜನೆಯಲ್ಲಿ ಪಾಲ್ಗೊಂಡ ಶಿಬಿರಾರ್ಥಿಗಳು ಕಳೆದ 6 ದಿನಗಳಿಂದ ಗ್ರಾಮದಲ್ಲಿ ಅನೇಕ ಚಟುವಟಿಕೆಗಳನ್ನು ಹಮ್ಮಿಕೊಂಡು ಜನರಲ್ಲಿ ಕಾನೂನು ತಿಳಿವಳಿಕೆಯ ಜಾಗೃತಿ ಮೂಡಿಸಿದ್ದಾರೆ ಎಂದರು.

ರಾಷ್ಟ್ರೀಯ ಸೇವಾ ಯೋಜನೆಯ ಯೋಜನಾಧಿಕಾರಿ ಡಾ. ಸಿ.ಬಿ. ರಣಗಟ್ಟಿಮಠ ಶಿಬಿರದ ವರದಿಯನ್ನು ವಾಚಿಸಿದರು. ಎನ್‌ಎಸ್‌ಎಸ್ ಶಿಬಿರಾರ್ಥಿಗಳಿಂದ ಯೋಜನಾಧಿಕಾರಿ ಡಾ.ಸಿ.ಬಿ. ರಣಗಟ್ಟಿಮಠ ಅವರಿಗೆ ಸನ್ಮಾನ ಜರುಗಿತು. ಸಾಹಿತಿ ಮಲ್ಲಿಕಾರ್ಜುನ ಪೂಜಾರ ಮಾತನಾಡಿದರು. ಉಪನ್ಯಾಸಕ ಶರತಕುಮಾರ ದರಬಾರ, ಗ್ರಾ.ಪಂ ಮಾಜಿ ಅಧ್ಯಕ್ಷ ಎಂ.ಎನ್. ಜಾಲಮ್ಮನವರ ಸೇರಿದಂತೆ ಇತರರಿದ್ದರು. ಸುನೀಲಕುಮಾರ ಮಾಡಲಗೇರಿ ಪ್ರಾರ್ಥಿಸಿದರು. ಶಿಬಿರಾರ್ಥಿಗಳಾದ ಬಸವರಾಜ ಕರಡಿ ಸ್ವಾಗತಿಸಿದರು. ಚನ್ನಬಸಪ್ಪ ಮೆಳ್ಳಿಗೇರಿ ನಿರೂಪಿಸಿದರು. ಮಹಮ್ಮದಯೂಸುಫ್ ನದಾಫ ವಂದಿಸಿದರು.

# ವಿಶ್ವ ಏಡ್ಸ್ ದಿನ ನಿಮಿತ್ತ ಕ್ಯಾಂಡಲ್ ಜಾಥಾ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಹಾಗೂ ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಜಿಲ್ಲಾ ವಾರ್ತಾ ಇಲಾಖೆ, ರಕ್ಷಣೆ ಜಿಲ್ಲಾ ಮಹಿಳಾ ಒಕ್ಕೂಟ, ಸೃಷ್ಟಿ ಸಂಕುಲ ಸಂಸ್ಥೆ, ನವಚೇತನ ಸಂಸ್ಥೆ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ನಗರದ ಗಾಂಧಿ ವೃತ್ತದಲ್ಲಿ ಶುಕ್ರವಾರದಂದು ವಿಶ್ವ ಏಡ್ಸ್ ದಿನದ ನಿಮಿತ್ತ ಕ್ಯಾಂಡರ್ ಜಾಥಾ ಮತ್ತು ಮೌನ ಆಚರಣೆ ಕಾರ್ಯಕ್ರಮ ಜರುಗಿತು.

ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿ, ಹೆಚ್.ಐ.ವಿ. ಸೋಂಕಿನಿಂದ ಮರಣ ಹೊಂದಿದವರ ಸಂತಾಪ ಸೂಚಕವಾಗಿ ಶೋಕ ವ್ಯಕ್ತಪಡಿಸಲು ಹಾಗೂ ಅವರಿಗೆ ಚಿರಶಾಂತಿ ಕೋರಲು ಕ್ಯಾಂಡಲ್ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ. ಸೋಂಕಿತರು ಎದೆಗುಂದದೆ ಮಾನಸಿಕ ಸ್ಥೈರ್ಯ ಮತ್ತು ಸದೃಢತೆಯಿಂದ ಜೀವನ ಸಾಗಿಸಲು ಸಂಘ ಸಂಸ್ಥೆಗಳು ಇಲಾಖೆಯೊಂದಿಗೆ ಕೈಜೋಡಿಸಿ ಶ್ರಮಿಸಲು ತಿಳಿಸಿದರು.

ಸರಕಾರಿ ಆಸ್ಪತ್ರೆಗಳಲ್ಲಿ ಐ.ಸಿ.ಟಿ.ಸಿ ಆಪ್ತ ಸಮಾಲೋಚಕರು ರೋಗಿಗಳಿಗೆ ನೈತಿಕ ಸ್ಥೈರ್ಯ ಮತ್ತು ಮಾನಸಿಕ ಬೆಂಬಲವನ್ನು ನೀಡಿ ಆಪ್ತ ಸಮಾಲೋಚನೆ ಮಾಡುತ್ತಿದ್ದು, ರೋಗಿಗಳು ಭಯ ಮುಕ್ತವಾಗಿ ಸಮಾಜದಲ್ಲಿ ಬದುಕಲು ಸಾಧ್ಯವಾಗಿದೆ. ಜೊತೆಗೆ ಹೆಚ್.ಐ.ವಿ. ಏಡ್ಸ್ ಮಸೂದೆ–2017 ಬದುಕಿಗೆ ಇನ್ನಷ್ಟು ಬಲ ನೀಡಿದೆ ಎಂದು ತಿಳಿಸಿದರು.

ಕ್ಯಾಂಡಲ್ ಜಾಥಾದಲ್ಲಿ ಎ.ಆರ್.ಟಿ. ಕೇಂದ್ರದ ಸಿಬ್ಬಂದಿ, ಐ.ಸಿ.ಟಿ.ಸಿ ಸಿಬ್ಬಂದಿ, ಡ್ಯಾಪ್ಕೂ ಸಿಬ್ಬಂದಿ, ರಕ್ಷಣೆ ಜಿಲ್ಲಾ ಮಹಿಳಾ ಒಕ್ಕೂಟದ ಶ್ರೀಮತಿ ಹಜರತಬಿ ಹಾಗೂ ಸದಸ್ಯರು, ನವಚೇತನ ನೆಟ್‌ವರ್ಕ ಸಂಸ್ಥೆಯ ಕು. ರಾಧಾ ಹಾಗೂ ಸದಸ್ಯರು, ಸೃಷ್ಟಿ ಸಂಕುಲ ಸಂಸ್ಥೆಯ ಆದಿತ್ಯಾ ಹಾಗೂ ಸದಸ್ಯರು, ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಗೂ ಎನ್.ಜಿ.ಓ. ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಶ್ರೀಮತಿ ಸುಮಿತ್ರಾ ಮಾವಿನಕಾಯಿ ಪ್ರಾರ್ಥಿಸಿದರು, ಬಸವರಾಜ ಲಾಳಗಟ್ಟಿ ಸರ್ವರನ್ನು ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ಸಂತೋಷ ಬಡಿಗೇರ ವಂದಿಸಿದರು.

**ದಾನೇಶ್ವರಿ ಮಹಿಳಾ ಮಂಡಳ, ವೀರಭದ್ರ, ಶಂಕರಲಿಂಗ ದೇವಸ್ಥಾನ ಟ್ರಸ್ಟ್‌ನಿಂದ ಆಯೋಜನೆ**

## ನಾಳೆಯಿಂದ ಶರಣೆ ದಾನಮ್ಮತಾಯಿ ಪುರಾಣ ಪ್ರವಚನ

■ವಿಜಯಸಾಕ್ಷಿ ಸುದ್ದಿ, ಗದಗ

ದಾನೇಶ್ವರಿ ಮಹಿಳಾ ಮಂಡಳ, ವೀರಭದ್ರ ದೇವಸ್ಥಾನ ಟ್ರಸ್ಟ್ ಕಮಿಟಿ, ಶಂಕರಲಿಂಗ ದೇವಸ್ಥಾನ ಟ್ರಸ್ಟ್ ಕಮಿಟಿ ಇವುಗಳ ಆಶ್ರಯದಲ್ಲಿ ಬಸವೇಶ್ವರ ನಗರದ ವೀರಭದ್ರೇಶ್ವರ ಕಲ್ಯಾಣ ಮಂಟಪದಲ್ಲಿ ಡಿ.4ರಿಂದ ಡಿ. 12ರವರೆಗೆ ಪ್ರತಿ ದಿನ ಸಂಜೆ 6 ಗಂಟೆಯಿಂದ ಶರಣೆ ದಾನಮ್ಮತಾಯಿ ಪುರಾಣ ಪ್ರವಚನ ಏರ್ಪಡಿಸಿದೆ.

ಡಿ. 4ರಂದು ಸಂಜೆ 5.30ಕ್ಕೆ ನಡೆಯುವ ಪ್ರಾರಂಭೋತ್ಸವ ಸಮಾರಂಭದ ಸಾನ್ನಿಧ್ಯವನ್ನು ಹಾಲಕೆರೆಯ ಪೂಜ್ಯ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ನಗರಸಭಾ ಸದಸ್ಯ ಚಂದ್ರಶೇಖರ ತಡಸದ ಆಗಮಿಸುವರು.

ಪೂಜ್ಯ ಪುಟ್ಟರಾಜ ಕವಿ ಗವಾಯಿಗಳು ವಿರಚಿತ ದಾನಮ್ಮತಾಯಿ ಪುರಾಣವು ಪಂ.ಎಂ.ಕಲ್ಲಿನಾಥಶಾಸ್ತ್ರಿ ಅಡ್ನೂರ ಅವರಿಂದ ಆರಂಭಗೊಳ್ಳುವದು. ಮೃತ್ಯುಂಜಯ ಹಿರೇಮಠ, ಹೇಮಂತಕುಮಾರ ಹಿರೇಮಠ ಅವರಿಂದ ಸಂಗೀತವಿದೆ.

ಡಿ. 7ರಂದು ಸಂಜೆ 6.30ಕ್ಕೆ ಶರಣೆ ದಾನಮ್ಮತಾಯಿ ತೊಟ್ಟಿಲು ಮತ್ತು ನಾಮಕರಣ



ಸಮಾರಂಭ ನಡೆಯಲಿದ್ದು, ಸುಧಾ ಕೆರೂರ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ಲಲಿತಾ ಪಿಳ್ಳಿ, ಶೋಭಾ ಕಾಡಪ್ಪನವರ, ಸಾವಿತ್ರಿ ಬೇವಿನಮರದ, ರೂಪಾ ಯಂಡಿಗೇರಿ, ಲಲಿತಾದೇವಿ ತಡಸದ ಆಗಮಿಸುವರು.

ಡಿ. 10ರ ಸಂಜೆ 6 ಗಂಟೆಗೆ ಶರಣೆ ದಾನಮ್ಮ ತಾಯಿ ಹಾಗೂ ಸೋಮಲಿಂಗ ವಿವಾಹ ಸಮಾರಂಭವನ್ನು ಗಂಗಾಧರ ಹಿರೇಮಠ ನಡೆಸಿಕೊಡುವರು.

ಅಧ್ಯಕ್ಷತೆಯನ್ನು ಶಿವಗಂಗಾ ಪಾಟೀಲ ವಹಿಸುವರು. ಅತಿಥಿಗಳಾಗಿ ಈರಮ್ಮ ಒಂಟಿಗೋಡಿಮಠ, ಲಕ್ಷ್ಮೀ ಗುರಿಕಾರ, ರತ್ನಾ ಇಟಗಿ, ಮಹಾನಂದ ಯಂಡಿಗೇರಿ, ಶೋಭಾ ಬೆಂಗಳೂರ, ಶಿವಲೀಲಾ ತಡಸದ ಆಗಮಿಸುವರು.

ಡಿ. 12ರ ಮುಂಜಾನೆ 8 ಗಂಟೆಗೆ ಶರಣೆ ದಾನಮ್ಮ ತಾಯಿ ಪಲ್ಲಕ್ಕಿ ಉತ್ಸವ ಹಾಗೂ ಕುಂಭಮೇಳ, ಮುಂಜಾನೆ 11 ಗಂಟೆಗೆ ಪುರಾಣ ಮಂಗಲೋತ್ಸವ ಸಮಾರಂಭ ನಡೆಯಲಿದೆ.

ಪುರಾಣ ಸಮಿತಿಯ ಅಧ್ಯಕ್ಷೆ ಸುಧಾ ಕೆರೂರ, ಗೌರವಾಧ್ಯಕ್ಷೆ ಶೈಲಜಾ ಕೊಡೇಕಲ್, ಸುರೇಖಾ ಪಿಳ್ಳಿ, ಕಾರ್ಯದರ್ಶಿ ವಿಜಯಲಕ್ಷ್ಮೀ ಕಾತರಕಿ, ಶೋಭಾ ಗುಗ್ಗರಿ ಉಪಸ್ಥಿತರಿರುವರು. ಗಣ್ಯ ಮಹನೀಯರು ಪ್ರಸಾದ ಸೇವೆ ವಹಿಸಿಕೊಂಡಿದ್ದಾರೆಂದು ಪ್ರಕಟಣೆ ತಿಳಿಸಿದೆ.

ಸಾನ್ನಿಧ್ಯವನ್ನು ಅಡ್ನೂರಿನ ಪೂಜ್ಯ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸುವರು. ಅಧ್ಯಕ್ಷತೆಯನ್ನು ಶ್ರೀಶೈಲಪ್ಪ ಯಂಡಿಗೇರಿ ವಹಿಸುವರು. ಅತಿಥಿಗಳಾಗಿ ಶಿವಪುತ್ರಪ್ಪ ಶಿವಶಿಂಪಿಗೇರ, ಶಿವಬಸಪ್ಪ ಯಂಡಿಗೇರಿ, ಬಸವರಾಜ ಕಾಡಪ್ಪನವರ, ಶಿವಕುಮಾರ ಬೇವಿನಮರದ, ಈರಣ್ಣ ಕಾತರಕಿ, ಸುರೇಶ ಸಿರಿಗಣ್ಣವರ, ವೀರೇಶ ಮುನವಳ್ಳಿ, ರಾಚಪ್ಪ ಮಿಣಜಗಿ, ಶಂಭು ಕಾರಕಟ್ಟಿ, ಬಸವರಾಜ ರಾಮನಕೊಪ್ಪ, ಜಗದೀಶ ಯಚ್ಚಲಗಾರ, ಪ್ರದೀಪ ಕೊಡೇಕಲ್ ಆಗಮಿಸುವರು.

## ಎನ್‌ಎಫ್‌ಎಸ್ ವಿಶ್ವವಿದ್ಯಾಲಯ ಬೆಳವಣಿಗೆಗೆ ಆದ್ಯತೆ: ಪ್ರಲ್ಹಾದ ಜೋಶಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಅಪರಾಧ ಪ್ರಕರಣಗಳ ತನಿಖೆಯಲ್ಲಿ ವಿಧಿ ವಿಜ್ಞಾನ ಪ್ರಕ್ರಿಯೆ ಮುಖ್ಯವಾಗಿದೆ. ಬೆರಳಚ್ಚು ಸೇರಿದಂತೆ ವಿಧಿ–ವಿಜ್ಞಾನ ತಜ್ಞರು ಬಹು ಬೇಡಿಕೆ ಹೊಂದಿದ್ದು, ರಾಜ್ಯದಲ್ಲಿ ನೂತನವಾಗಿ ಆರಂಭವಾಗಿರುವ ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಲಯದ ಬೆಳವಣಿಗೆಗೆ ಕೇಂದ್ರ ಸಕಾರವು ಅಗತ್ಯ ಸಹಾಯ ಮತ್ತು ಪ್ರೋತ್ಸಾಹವನ್ನು ನೀಡಲಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಮತ್ತು ಗಣಿ, ಕಲ್ಲಿದ್ದಲು ಸಚಿವ ಪ್ರಲ್ಹಾದ ಜೋಶಿ ಅವರು ಹೇಳಿದರು.

ಅವರು ವಾಲ್ಮೀಕಿ ಕಟ್ಟಡದಲ್ಲಿರುವ ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಯ ಧಾರವಾಡ



ಹಾಗೂ ಕರ್ನಾಟಕ ಡಿ.ಎನ್.ಎ ಸಂಶೋಧನಾ ಸಂಸ್ಥೆ ಧಾರವಾಡ ಜಂಟಿಯಾಗಿ ಆಯೋಜಿಸಿದ್ದ ಡಿ.ಎನ್.ಎ ಫೋರೆನ್ಸಿಕ್ಸ್‌ನಲ್ಲಿ ಇತ್ತೀಚಿನ ಪ್ರವೃತ್ತಿಗಳ ಕುರಿತ ನವೆಂಬರ್ 29 ಮತ್ತು 30ರಂದು ಅಂತಾರಾಷ್ಟ್ರೀಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಹೆಚ್ಚುತ್ತಿರುವ ಅಪರಾಧ ಪ್ರಕರಣಗಳನ್ನು ನಿಯಂತ್ರಿಸುವಲ್ಲಿ ಆರೋಪಿಗಳ ತನಿಖೆಯಲ್ಲಿ ಹೊಸ ತಂತ್ರಜ್ಞಾನಗಳ ಬಳಕೆ ಅಗತ್ಯವಿದೆ. ವಿಶ್ವವಿದ್ಯಾಲಯ ಮಟ್ಟದಲ್ಲಿ ಉನ್ನತ ವ್ಯಾಸಾಂಗ ಮಾಡುವ ಪದವೀದರರು ಸಮರ್ಥವಾಗಿ ಈ ಕಾರ್ಯವನ್ನು ನಿರ್ವಹಿಸುತ್ತಾರೆ.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಗೃಹ ಇಲಾಖೆಯ ಮೂಲಕ ವಿಧಿ ವಿಜ್ಞಾನ ಪದವೀಧರರಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಎನ್‌ಎಫ್‌ಎಸ್‌ಯು ಕ್ಯಾಂಪಸ್‌ನ ನಿರ್ದೇಶಕ ಡಾ.ಮಂಜುನಾಥ ಘಾಟೆ ಸ್ವಾಗತಿಸಿದರು.

ಇದೇ ಸಂದರ್ಭದಲ್ಲಿ ಎನ್‌ಎಫ್‌ಎಸ್‌ಯು ಧಾರವಾಡದ ಸುದ್ದಿಪತ್ರದ ಮೊದಲ ಆವೃತ್ತಿಯನ್ನು ಸಚಿವ ಪ್ರಹ್ಲಾದ ಜೋಶಿ ಅವರು ಬಿಡುಗಡೆ ಮಾಡಿದರು.

ಈ ಸಮ್ಮೇಳನದಲ್ಲಿ ವಿವಿಧ ಶಿಕ್ಷಣ ಸಂಸ್ಥೆಗಳು, ವೈದ್ಯಕೀಯ ಮತ್ತು ಸಂಶೋಧನಾ ಸಂಸ್ಥೆಗಳು, ರಾಜ್ಯ ಮತ್ತು ಪ್ರಾದೇಶಿಕ ವಿಧಿ ವಿಜ್ಞಾನ ಪ್ರಯೋಗಾಲಯಗಳಿಂದ ವಿದ್ಯಾರ್ಥಿಗಳು, ಪ್ರಾಧ್ಯಾಪಕರು ಮತ್ತು ಆಹ್ವಾನಿತ ಅತಿಥಿಗಳು ಸೇರಿದಂತೆ 250 ಕ್ಕೂ ಹೆಚ್ಚು ಜನ ಭಾಗವಹಿಸಿದ್ದರು.

## ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಮನವಿ



■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಜಿಲ್ಲೆಯ ಗಂಗಾವತಿಯ ಹುಸೇನ್ ಸಾಬ್ ಮೇಲೆ ಹಲ್ಲೆ ನಡೆಸಿ, ಗಡ್ಡಕ್ಕೆ ಬೆಂಕಿ ಹಚ್ಚಿ, ಹಣ ದೋಚಿದ್ದಲ್ಲದೆ ಜೈ ಶ್ರೀರಾಮ್ ಎನ್ನುವಂತೆ ಬಲವಂತಪಡಿಸಿ ಅವಮಾನ ಮಾಡಿದ ಯುವಕರನ್ನು ಶೀಘ್ರ ಪತ್ತೆ ಹಚ್ಚಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋಧಾ ಎಸ್.ವಂಟಿಗೋಡಿ ಅವರಿಗೆ ವಿವಿಧ ಸಂಘಟನೆಗಳಿಂದ ಮನವಿ ಸಲ್ಲಿಸಲಾಯಿತು.

ಈ ಯುವಕರನ್ನು ಸುಮ್ಮನೆ ಬಿಟ್ಟರೆ ಕೋಮು ಗಲಭೆಯನ್ನು ಹುಟ್ಟು ಹಾಕಿ, ಶಾಂತಿಯನ್ನು ಕದಡುತ್ತಾರೆ. ಘಟನೆ ನಡೆದ ಸ್ಥಳದಲ್ಲಿರುವ ಸಿಸಿ ಕ್ಯಾಮೆರಾಗಳನ್ನು ಪರಿಶೀಲಿಸಿ ತಕ್ಷಣ ತಪ್ಪಿತಸ್ಥರನ್ನು ಬಂಧಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಬಂಡಾಯ ಸಾಹಿತಿ ಅಲ್ಲಮ ಪ್ರಭು ಬೆಟ್ಟದೂರು, ಅಖಿಲ ಭಾರತ ಕಾರ್ಮಿಕ ಸಂಘಟನೆಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಬಸವರಾಜ್ ಶೀಲವಂತರ್, ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಎಸ್.ಎ. ಗಫಾರ್, ಕಾಂಗ್ರೆಸ್ ಪಕ್ಷದ ಅಲ್ಪಸಂಖ್ಯಾತರ ವಿಭಾಗದ ಜಿಲ್ಲಾಧ್ಯಕ್ಷ ಸಲೀಮ್ ಅಳವಂಡಿ, ಭಾರತ ಕಮ್ಯೂನಿಸ್ಟ್ ಪಕ್ಷದ (ಸಿಪಿಐ) ಜಿಲ್ಲಾ ಕಾರ್ಯದರ್ಶಿ ಹುಲುಗಪ್ಪ ಅಕ್ಕಿ ರೊಟ್ಟಿ, ಕರ್ನಾಟಕ ಭೀಮ್ ಆರ್ಮಿ ಜಿಲ್ಲಾಧ್ಯಕ್ಷ ನಿಂಗು ಜಿ.ಎಸ್. ಬೆಣಕಲ್, ಕಾರ್ಮಿಕ ಸಂಘಟನೆ ಮುಖಂಡ ಕೆ.ಬಿ. ಗೋನಾಳ ಮುಂತಾದವರು ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋಧಾ ಎಸ್.ವಂಟಿಗೋಡಿ, ಘಟನೆ ತಮ್ಮ ಗಮನಕ್ಕೆ ಬಂದಿದ್ದು, ಇದನ್ನು ಗಂಭೀರವಾಗಿ ತೆಗೆದುಕೊಂಡಿದ್ದೇವೆ. ಆದಷ್ಟು ಬೇಗ ವಾಸ್ತವಾಂಶ ಹೇಳುತ್ತೇನೆ ಎಂದು ತಿಳಿಸಿದರು.

## ಎಸ್‌ಡಿಎಂಸಿ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಲ್ಲಿನ ಸರ್ಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಯಲ್ಲಿ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನ ಆಯ್ಕೆ ಪ್ರಕ್ರಿಯೆ ನಡೆಯಿತು. ಅಧ್ಯಕ್ಷರಾಗಿ ಮಲ್ಲೇಶಪ್ಪ ಬಸಾಪುರ, ಉಪಾಧ್ಯಕ್ಷರಾಗಿ ನಿಖಿತ ಶೇರಖಾನೆ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಸದಸ್ಯರಾಗಿ ರಾಜಕುಮಾರ್ ಸಾತಪುತೆ, ಶಾರದಾ ಲಕ್ಷ್ಮೇಶ್ವರ, ದಾದಾಪೀರ್ ಅಂಜಣ್ಣವರ, ರುಖಿಯಾ ಬಾಲೇಬಾಯಿ, ಬಸವರಾಜ ವಾಲ್ಮೀಕಿ, ಗೋವಿಂದ ಗೋಸಾವಿ, ಯಲ್ಲಪ್ಪ ಗಣಾಚಾರಿ, ಮಾಲತೇಶ ಬಳಗಾನೂರ, ನಾಗಪ್ಪ ಬಸಾಪುರ, ಈರಣ್ಣ ಹಾವಿನಾಳ, ವಿಜಯಲಕ್ಷ್ಮೀ ಸಿಂಧೆ, ಸುಮಂಗಲ ಹೊಂಬಾಳ, ಕವಿತಾ ಗುಂಜಳ, ಲಕ್ಷ್ಮೀ ಬಸಾಪುರ, ಜ್ಯೋತಿ ಗೋಸಾವಿ, ಗಂಗವ್ವ ಹುಲಕೋಟಿ ಎಸ್‌ಡಿಎಂಸಿ ಸದಸ್ಯರಾಗಿ ಆಯ್ಕೆಯಾದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ರಾಜೀವ ಕುಂಬಿ, ಸಿಆರ್‌ಪಿಗಳಾದ ಸತೀಶ ಬೋಮಲೆ, ಉಮೇಶ ನೇಕಾರ, ಮುಖ್ಯ ಶಿಕ್ಷಕ ಬಸವರಾಜ ಕುಂಬಾರ, ಶಿಕ್ಷಕರಾದ ಆರ್.ಎಮ್. ಶಿರಹಟ್ಟಿ, ರಾಮಣ್ಣ ಉಪನಾಳ ಹಾಗೂ ಪಾಲಕರು ಹಾಜರಿದ್ದರು.

## ಡಿ.25ರಿಂದ 27ರವೆಗೆ ಜಿಲ್ಲಾ ಮಟ್ಟದ ಫಲ–ಪುಷ್ಪ ಪ್ರದರ್ಶನ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾ ಮಟ್ಟದ 2023–24ನೇ ಸಾಲಿನ ಫಲ–ಪುಷ್ಪ ಪ್ರದರ್ಶನವನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ, ಕೃಷಿ ಇಲಾಖೆ ಮತ್ತು ಫಲ–ಪುಷ್ಪ ಪ್ರದರ್ಶನ ಸಮಿತಿ, ಜಿಲ್ಲಾ ಹಾಪ್ ಕಾಮ್ಸ್, ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್ ಧಾರವಾಡ ಇವರ ಸಹಯೋಗದೊಂದಿಗೆ ಡಿಸೆಂಬರ್ 25ರಿಂದ 27ರವರೆಗೆ ಹುಬ್ಬಳ್ಳಿಯ ಇಂದಿರಾ ಗಾಜಿನ ಮನೆ ಆವರಣದಲ್ಲಿ ಆಯೋಜಿಸಲಾಗಿದೆ.

ಸದರಿ ಫಲ–ಪುಷ್ಪ ಪ್ರದರ್ಶನದಲ್ಲಿ ಸರ್ಕಾರಿ, ಅರೆ ಸರ್ಕಾರಿ, ಖಾಸಗಿ ಸಂಘ ಸಂಸ್ಥೆಗಳು, ರೈತರು ಮತ್ತು ಸಾರ್ವಜನಿಕರಿಗೆ ತೋಟಗಾರಿಕೆ ಬೆಳೆಗಳು, ಹೂಗಳು ಮತ್ತು ಅಲಂಕಾರಿಕ ಗಿಡಗಳ ಪ್ರದರ್ಶನದ ಸ್ಪರ್ಧೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ದೂರವಾಣಿ ಸಂಖ್ಯೆ: 0836–2957801ರಲ್ಲಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯ ವಲಯ) ಧಾರವಾಡ ಇವರನ್ನು ಸಂಪರ್ಕಿಸಬಹುದೆಂದು ತೋಟಗಾರಿಕೆ ಇಲಾಖೆ ಪ್ರಕಟಣೆ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka